# ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ:ಮಂಗಳೂರು ವಿಭಾಗ:ಮಂಗಳೂರು

ಸಂ:ಕರಾಸ:ಮಂವಿ:ಸಂ:ವಾ: 4353 :2019–20 ದಿನಾಂಕ:12.02.2020

## ಇ–ಟೆಂಡರ್ ಪ್ರಕಟಣೆ ಸಂಖ್ಯೆ:08/2019–20
## (ಇ–ಪ್ರೊಕ್ಯೂರ್‌ಮೆಂಟ್ ಮೂಲಕ)

ಕ.ರಾ.ರ.ಸಾ.ನಿಗಮ, ಮಂಗಳೂರು ವಿಭಾಗದ ವ್ಯಾಪ್ತಿಗೆ ಬರುವ ಮಂಗಳೂರು ಬಸ್ ನಿಲ್ದಾಣದಲ್ಲಿ ಖಾಲಿಯಾಗಲಿರುವ ವಾಣಿಜ್ಯ ಮಳಿಗೆ ಸಂಖ್ಯೆ:02 ಮತ್ತು ಉಡುಪಿ ಘಟಕದಲ್ಲಿರುವ ಉಪಹಾರಗೃಹ(ತೆರೆದ ಸ್ಥಳ) ಮತ್ತು ಉಡುಪಿಯಲ್ಲಿ ನೂತನವಾಗಿ ಪ್ರಾರಂಭಗೊಳ್ಳುವ ಉಡುಪಿ ನಗರ ಬಸ್ಸುನಿಲ್ದಾಣದಲ್ಲಿರುವ ವಾಣಿಜ್ಯ ಮಳಿಗೆಗಳಿಗೆ ಹೊಸದಾಗಿ ಪರವಾನಿಗೆದಾರರನ್ನು ಆಯ್ಕೆ ಮಾಡಲು ತೆರೆದ ಸ್ಥಳಕ್ಕೆ 03 ವರ್ಷದ ಅವಧಿಗೆ ಮತ್ತು <u>ಕಟ್ಟಿದ ಮಳಿಗೆ 05ವರ್ಷ ಹಾಗೂ ಹಾಲ್/ಮಳಿಗೆ ಸಂಖ್ಯೆ:15ನ್ನು 10 ವರ್ಷದ ಅವಧಿಗೆ</u> (ಪ್ರತೀ ವರ್ಷ ಶೇ.10ರ ಪರವಾನಿಗೆ ಶುಲ್ಕದ ಹೆಚ್ಚಳದೊಂದಿಗೆ) ಪರವಾನಿಗೆದಾರರನ್ನು ಆಯ್ಕೆ ಮಾಡಿ ಪರವಾನಿಗೆ ನೀಡಲು ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಇ-ಟೆಂಡರ್ ಅರ್ಜಿಯನ್ನು ಆಹ್ವಾನಿಸಲಾಗಿದೆ. ಇ-ಟೆಂಡರ್ ದಸ್ತಾವೇಜುಗಳನ್ನು ಇ–ಪ್ರಕ್ಯೂರ್‌ಮೆಂಟ್ ವೆಬ್‌ಸೈಟ್ "https://eproc.karnataka.gov.in"ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ಇ-ಟೆಂಡರ್‌ನಲ್ಲಿ ಭಾಗವಹಿಸುವವರು ಇ-ಪ್ರೊಕ್ಯೂರ್‌ಮೆಂಟ್‌ನಲ್ಲಿ ಸೂಚಿಸಿರುವ ನಿಗದಿತ ದಾಖಲಾತಿಗಳೊಂದಿಗೆ ಆನ್‌ಲೈನ್ ಅರ್ಜಿ ಸಲ್ಲಿಕೆಯ ಕೊನೆಯ <u>ದಿನಾಂಕ:17.03.**2020**</u>ರಂದು ಸಮಯ <u>**16.00**</u> ಗಂಟೆಯವರೆಗೆ ಸಲ್ಲಿಸುವುದು. ಅರ್ಜಿದಾರರು ಮಳಿಗೆಗೆ ನಿಗದಿಪಡಿಸಿರುವ ಅರ್ಜಿ ಶುಲ್ಕ ಮತ್ತು ಅನ್ವಯಿಸುವ ಜಿಎಸ್‌ಟಿ ಮೊತ್ತದ ಡಿ.ಡಿ ಹಾಗೂ ಇ.ಎಂ.ಡಿ ಮೊತ್ತದ ಮೂಲ ಡಿ.ಡಿಗಳನ್ನು, ಇ–ಪೋರ್ಟ್‌ನಲ್ಲಿ ಅಪ್‌ಲೋಡ್ ಮಾಡಿರುವ ಇತರ ಅಗತ್ಯ ದಾಖಲಾತಿಗಳೊಂದಿಗೆ ಮಂಗಳೂರು ವಿಭಾಗೀಯ ಕಛೇರಿಯ ಸಂಚಾರ ಶಾಖೆಯಲ್ಲಿ ಇಟ್ಟಿರುವ ಟೆಂಡರ್ ಪೆಟ್ಟಿಗೆಯಲ್ಲಿ ದಿನಾಂಕ:18.03.2020 ರಿಂದ ದಿನಾಂಕ:19.03.2020ರವರೆಗೆ ಕಛೇರಿ ಸಮಯ ಬೆಳಿಗ್ಗೆ 10.00ರಿಂದ ಸಂಜೆ 5.30ವರೆಗೆ ಸಲ್ಲಿಸುವುದು. ಇ–ಟೆಂಡರ್ ತೆರೆಯುವ <u>ದಿನಾಂಕ:20**.03..2020**</u> ರಂದು ಸಮಯ ಬೆಳಗ್ಗೆ <u>**11.30**</u> ಗಂಟೆಗೆ. (ಯಾವುದೇ ತಾಂತ್ರಿಕ ದೋಷವಿಲ್ಲದಿದ್ದಲ್ಲಿ).

| ಕ್ರ. ಸಂ | ಬಸ್ ನಿಲ್ದಾಣ/ಘಟಕ ಹೆಸರು | ಮಳಿಗೆಯ ವಿವರ | ವಿಸ್ತೀರ್ಣ (ಚ.ಅ) | ಪರವಾನಿಗೆ ಅವಧಿ | ಕನಿಷ್ಠ ಮಾಸಿಕ ಪರವಾನಗಿ ಶುಲ್ಕ(ಜಿಎಸ್‌ಟಿ ಹಾಗೂ ಇನ್ನಿತರ ಶುಲ್ಕ ಒಳಗೊಂಡಿರುವುದಿಲ್ಲ (ರೂ.ಗಳಲ್ಲಿ) | ಡಿ.ಡಿ.ಮೂಲಕ ಈ ಕಛೇರಿಗೆ ಸಲ್ಲಿಸಬೇಕಾದ ಇ.ಎಂ.ಡಿ ಮೊತ್ತ (ರೂ.ಗಳಲ್ಲಿ) | ಇ–ಪ್ರೊಕ್ಯೂರ್ ಮೆಂಟ್ ಮೂಲಕ ಪಾವತಿಸಬೇಕಾದ ಇ.ಎಂ.ಡಿ ಮೊತ್ತ (ರೂ.ಗಳಲ್ಲಿ) | ಡಿ.ಡಿ ಮೂಲಕ ಈ ಕಛೇರಿಗೆ ಸಲ್ಲಿಸಬೇಕಾದ ಅರ್ಜಿ ಶುಲ್ಕ + ಜಿ.ಎಸ್.ಟಿ (ರೂ.ಗಳಲ್ಲಿ) | ಖಾಲಿ ಅಗುವ ದಿನಾಂಕ |
|---|---|---|---|---|---|---|---|---|---|
| 1 | ಮಂಗಳೂರು | ಜನರಲ್ ಸ್ಟಾಲ್ ಮಳಿಗೆ ಸಂಖ್ಯೆ:02 | 96.00 | 5ವರ್ಷ | 34,133/- | 101899/- | 500/– | 403/– | 05.03.2020 |
| 2 | ಉಡುಪಿ ಘಟಕ | ಉಪಹಾರಗೃಹ (ತೆರೆದ ಸ್ಥಳ) | 120.00 | 3ವರ್ಷ | 1210/- | 3130/- | 500/- | 118/- | 09.06.2020 |

<u>ನೂತನವಾಗಿ ಪ್ರಾರಂಭಗೊಳ್ಳುವ ಉಡುಪಿ ಬಸ್ಸುನಿಲ್ದಾಣದ ವಾಣಿಜ್ಯ ಮಳಿಗೆಗಳ ವಿವರ ಕೆಳಕಂಡಂತಿದ್ದು ಬಸ್ಸುನಿಲ್ದಾಣ ಪ್ರಾರಂಭಗೊಂಡ /ಉಧ್ಘಾಟಣೆಗೊಂಡ ನಂತರ ಮಳಿಗೆಗಳು ವಾಣಿಜ್ಯ ವಹಿವಾಟಿಗೆ ಲಭ್ಯವಾಗುವುದು.</u>

| ಕ್ರ. ಸಂ | ಬಸ್ ನಿಲ್ದಾಣದ ಹೆಸರು | ಮಳಿಗೆಯ ವಿವರ | ವಿಸ್ತೀರ್ಣ (ಚ.ಅ) | ಪರವಾನಿಗೆ ಅವಧಿ | ಕನಿಷ್ಠ ಮಾಸಿಕ ಪರವಾನಗಿ ಶುಲ್ಕ(ಜಿಎಸ್‌ಟಿ ಹಾಗೂ ಇನ್ನಿತರ ಶುಲ್ಕ ಒಳಗೊಂಡಿರುವುದಿಲ್ಲ (ರೂ.ಗಳಲ್ಲಿ) | ಡಿ.ಡಿ.ಮೂಲಕ ಈ ಕಛೇರಿಗೆ ಸಲ್ಲಿಸಬೇಕಾದ ಇ.ಎಂ.ಡಿ ಮೊತ್ತ (ರೂ.ಗಳಲ್ಲಿ) | ಇ–ಪ್ರೊಕ್ಯೂರ್ ಮೆಂಟ್ ಮೂಲಕ ಪಾವತಿಸಬೇಕಾದ ಇ.ಎಂ.ಡಿ ಮೊತ್ತ (ರೂ.ಗಳಲ್ಲಿ) | ಡಿ.ಡಿ ಮೂಲಕ ಈ ಕಛೇರಿಗೆ ಸಲ್ಲಿಸಬೇಕಾದ ಅರ್ಜಿ ಶುಲ್ಕ + ಜಿ.ಎಸ್.ಟಿ (ರೂ.ಗಳಲ್ಲಿ) |
|---|---|---|---|---|---|---|---|---|
| 1 | ಉಡುಪಿ | ಜನರಲ್ ಸ್ಟಾಲ್ ಮಳಿಗೆ ಸಂಖ್ಯೆ:01 | 101.18 | 5ವರ್ಷ | 5650/- | 16450/- | 500/- | 118/- |
| 2 | ಉಡುಪಿ | ಜನರಲ್ ಸ್ಟಾಲ್ ಮಳಿಗೆ ಸಂಖ್ಯೆ:02 (ವಿಕಲಚೇತನರಿಗೆ ಮೀಸಲು) | 62.11 | 5ವರ್ಷ | 1735/- | 4705/- | 500/- | 118/- |

| | | | | | | | | |
|---|---|---|---|---|---|---|---|---|
| 3 | ಉಡುಪಿ | ಜನರಲ್ ಸ್ಟಾಲ್ ಮಳಿಗೆ ಸಂಖ್ಯೆ:03 (ಪರಿಶಿಷ್ಟ ಜಾತಿಗೆ ಮೀಸಲು) | 62.22 | 5ವರ್ಷ | 3470/- | 9910/- | 500/- | 118/- |
| 4 | ಉಡುಪಿ | ಜನರಲ್ ಸ್ಟಾಲ್ ಮಳಿಗೆ ಸಂಖ್ಯೆ:04 | 245.31 | 5ವರ್ಷ | 13700/- | 40600/- | 500/- | 162/- |
| 5 | ಉಡುಪಿ | ಜನರಲ್ ಸ್ಟಾಲ್ ಮಳಿಗೆ ಸಂಖ್ಯೆ:05 | 245.31 | 5ವರ್ಷ | 13700/- | 40600/- | 500/- | 162/- |
| 6 | ಉಡುಪಿ | ಜನರಲ್ ಸ್ಟಾಲ್ ಮಳಿಗೆ ಸಂಖ್ಯೆ:06 | 188.26 | 5ವರ್ಷ | 10500/- | 31000/- | 500/- | 124/- |
| 7 | ಉಡುಪಿ | ಜನರಲ್ ಸ್ಟಾಲ್ ಮಳಿಗೆ ಸಂಖ್ಯೆ:07 | 182.56 | 5ವರ್ಷ | 10200/- | 30100/- | 500/- | 120/- |
| 8 | ಉಡುಪಿ | ಜನರಲ್ ಸ್ಟಾಲ್ ಮಳಿಗೆ ಸಂಖ್ಯೆ:08 (ಪರಿಶಿಷ್ಟ ಜಾತಿಗೆ ಮೀಸಲು) | 182.56 | 5ವರ್ಷ | 10200/- | 30100/- | 500/- | 120/- |
| 9 | ಉಡುಪಿ | ಜನರಲ್ ಸ್ಟಾಲ್ ಮಳಿಗೆ ಸಂಖ್ಯೆ:09 | 286.97 | 5ವರ್ಷ | 16000/- | 47500/- | 500/- | 189/- |
| 10 | ಉಡುಪಿ | ಜನರಲ್ ಸ್ಟಾಲ್ ಮಳಿಗೆ ಸಂಖ್ಯೆ:10 (ಪರಿಶಿಷ್ಟ ಜಾತಿಗೆ ಮೀಸಲು) | 293.64 | 5ವರ್ಷ | 16400/- | 48700/- | 500/- | 194/- |
| 11 | ಉಡುಪಿ | ಜನರಲ್ ಸ್ಟಾಲ್ ಮಳಿಗೆ ಸಂಖ್ಯೆ:11 (ಪರಿಶಿಷ್ಟ ಪಂಗಡಕ್ಕೆ ಮೀಸಲು) | 286.97 | 5ವರ್ಷ | 16000/- | 47500/- | 500/- | 189/- |
| 12 | ಉಡುಪಿ | ಜನರಲ್ ಸ್ಟಾಲ್ ಮಳಿಗೆ ಸಂಖ್ಯೆ:12 (ವಿಕಲಚೇತನರಿಗೆ ಮೀಸಲು) | 116.79 | 5ವರ್ಷ | 3300/- | 9400/- | 500/- | 118/- |
| 13 | ಉಡುಪಿ | ಉಪಹಾರಗೃಹ (ಸಸ್ಯಾಹಾರಿ):ಮಳಿಗೆ ಸಂಖ್ಯೆ:13 | 987.70 | 5ವರ್ಷ | 55100/- | 164800/- | 500/- | 650/- |
| | ಉಪಹಾರಗೃಹ(ಸಸ್ಯಾಹಾರಿ) ಮಳಿಗೆ ಸಂಖ್ಯೆ:13ಕ್ಕೆ ಐದು ವರ್ಷದ ಅವಧಿಗೆ ಪರವಾನಿಗೆ ನೀಗದಿಪಡಿಸಲಾಗಿದ್ದು, ಸದರಿ ಉಪಹಾರಗೃಹದ ನವೀಕರಣಕ್ಕೆ ಸಂಬಂಧಿಸಿದಂತೆ ಇ-ಟೆಂಡರ್‌ನ ಷರತ್ತು ನಿಬಂಧನೆಗಳ ಖಂಡಿಕೆ(24)ರ ಕ್ರಮಸಂಖ್ಯೆ:18ನ್ನು ಅವಲೋಕಿಸುವುದು. | | | | | | | |
| 14 | ಉಡುಪಿ | ಉಪಹಾರದರ್ಶಿನಿ ಮಳಿಗೆ ಸಂಖ್ಯೆ:14 | 361.67 | 5ವರ್ಷ | 20200/- | 60100/- | 500/- | 238/- |
| | ಮೇಲ್ಕಂಡ ಮಳಿಗೆಗಳಿಗೆ ಐದು(05) ವರ್ಷದ ಅವಧಿಗೆ ಪರವಾನಿಗೆ ಅವಧಿ ನಿಗದಿಪಡಿಸಲಾಗಿರುತ್ತದೆ. ಇ-ಟೆಂಡರ್ ಪ್ರಕಟಣೆಯಲ್ಲಿ ಸೂಚಿಸಿರುವ ಮಳಿಗೆಗಳಿಗೆ ಕನಿಷ್ಟ ಮಾಸಿಕ ಪರವಾನಿಗೆ ಶುಲ್ಕವನ್ನು ನಿಗದಿಪಡಿಸಿದ್ದು, ಸದರಿ ಕನಿಷ್ಟ ಮಾಸಿಕ ಪರವಾನಿಗೆ ಶುಲ್ಕವು ಜಿಎಸ್‌ಟಿ ಹಾಗೂ ಅನ್ವಯಿಸುವ ಇತರ ಶುಲ್ಕವನ್ನು ಒಳಗೊಂಡಿರುವುದಿಲ್ಲ. ಬಿಡ್ದುದಾರರು ಇ-ಟೆಂಡರ್‌ನಲ್ಲಿ ನಮೂದಿಸುವ ಬಿಡ್ಡು ಮೊತ್ತವನ್ನು ಕೇವಲ ಮಾಸಿಕ ಪರವಾನಿಗೆ ಶುಲ್ಕವೆಂದು ಮಾತ್ರ ಪರಿಗಣಿಸಲಾಗುವುದು. ಆಯ್ಕೆಗೊಂಡ H1 ಪರವಾನಿಗೆದಾರರು ತಾವು ಸೂಚಿಸಿದ ಮಾಸಿಕ ಪರವಾನಿಗೆ ಶುಲ್ಕದ ಮೇಲೆ ಜಿಎಸ್‌ಟಿ ಹಾಗೂ ಅನ್ವಯಿಸುವ ಇತರ ಶುಲ್ಕಗಳನ್ನು ಪ್ರತೀ ಮಾಹೆ ಸಂದಾಯಮಾಡತಕ್ಕದ್ದು. | | | | | | | |
| 15 | ಉಡುಪಿ | ಕಛೇರಿ ಬಳಕೆ/ವಾಣಿಜ್ಯ ಬಳಕೆ/ಬಟ್ಟೆ | 5856.58 | 10ವರ್ಷ | 100000/- | 299500/- | 500/- | 1180/- |

| | | | | | | | | |
|---|---|---|---|---|---|---|---|---|
| | | ಮಳಿಗೆ/ಬೃಹತ್ ಮಳಿಗೆ/ಯಾತ್ರಿ ನಿವಾಸ/ಡಾರ್ಮಿಟರಿ, ಮಳಿಗೆ ಸಂಖ್ಯೆ:15 | | | | | | |
| 16 | ಉಡುಪಿ | ದ್ವಿಚಕ್ರ ವಾಹನ ಮತ್ತು ಕಾರ್ ಪಾರ್ಕಿಂಗ್ ನಿರ್ವಹಣೆ (ತೆರೆದ/ತಳಅಂತಸ್ತು,ಕಟ್ಟಿದ ಸ್ಥಳ) | 4541.23 | 03ವರ್ಷ | 75000/- | 224500/- | 500/- | 885/- |

| ಕ್ರ .ಸಂ | ವಿವರ | ದಿನಾಂಕ | ಸಮಯ |
|---|---|---|---|
| 1 | ಇ-ಟೆಂಡರ್ ಅರ್ಜಿಸಲ್ಲಿಸಲು ಕೊನೆಯ ದಿನಾಂಕ ಮತ್ತು ಸಮಯ | 17.03.2020 | 16:00 |
| 2 | ಇ-ಟೆಂಡರ್ ತೆರೆಯುವ ದಿನಾಂಕ ಮತ್ತು ಸಮಯ (ಯಾವುದೇ ತಾಂತ್ರಿಕ ದೋಷ ಇಲ್ಲದಿದ್ದಲ್ಲಿ) | 20.03.2020 | 11:30 |
| 3 | ಅರ್ಜಿದಾರರು ಮಳಿಗೆಗೆ ನಿಗದಿಪಡಿಸಿರುವ ಅರ್ಜಿ ಶುಲ್ಕ ಅನ್ವಯಿಸುವ ಜಿಎಸ್‌ಟಿ ಹಾಗೂ ಇ.ಎಂ.ಡಿ ಮೊತ್ತದ ಮೂಲ ಡಿ.ಡಿಗಳನ್ನು ಇ-ಪೋರ್ಟ್‌ನಲ್ಲಿ ಅಪ್‌ಲೋಡ್ ಮಾಡಿರುವ ಇತರ ಅಗತ್ಯ ದಾಖಲಾತಿಗಳೊಂದಿಗೆ ಮಂಗಳೂರು ವಿಭಾಗೀಯ ಕಛೇರಿಯ ಸಂಚಾರ ಶಾಖೆಯಲ್ಲಿ ಇಟ್ಟಿರುವ ಟೆಂಡರ್ ಪೆಟ್ಟಿಗೆಯಲ್ಲಿ ಸಲ್ಲಿಸುವ ದಿನಾಂಕ ಮತ್ತು ಸಮಯ (ಕಛೇರಿ ಸಮಯ ಬೆಳಿಗ್ಗೆ 10.00ರಿಂದ ಸಂಜೆ 5.30ವರೆಗೆ) | ದಿ:18.03.2020ರ ಸಮಯ 10:00 ರಿಂದ 19–03–2020ರ ಸಮಯ 17:30ರವರೆಗೆ | |

ವಿಶೇಷ ಸೂಚನೆ:

1) ಇ-ಟೆಂಡರ್ ಪ್ರಕಟಣೆಯಲ್ಲಿ ಮಳಿಗೆಗಳಿಗೆ ನಿಗದಿಪಡಿಸಿದ ಇ.ಎಂ.ಡಿ ಮೊತ್ತದಲ್ಲಿ ರೂ.500–00 ಗಳನ್ನು ಮಾತ್ರ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಪಾವತಿಸುವುದು ಉಳಿದ ಇ.ಎಂ.ಡಿ ಮೊತ್ತವನ್ನು ಡಿ.ಡಿ.ಮೂಲಕ ಪಡೆದು ಸದರಿ ಡಿ.ಡಿಯ ಹಿಂಭಾಗದಲ್ಲಿ ತಮ್ಮ ಹೆಸರು, ಬಿಡ್ ಮಾಡುವ ಮಳಿಗೆಯ ಹೆಸರು & ಮಳಿಗೆಯ ಸಂಖ್ಯೆಯನ್ನು ನಮೂದಿಸಿ, ಸದರಿ ಡಿ.ಡಿಯ ಜರಾಕ್ಸ್ ಪ್ರತಿಯನ್ನು ಇತರೆ ದಾಖಲಾತಿಗಳೊಂದಿಗೆ ಅಪ್‌ಲೋಡ್ ಮಾಡುವುದು.
2) ಇ–ಪ್ರೊಕ್ಯೂರ್‌ಮೆಂಟ್ ಭಾಗವಹಿಸುವ ಬಿಡ್‌ದಾರರು ಟೆಂಡರ್ ಪ್ರಕಟಣೆಯಲ್ಲಿ ಸೂಚಿಸಿರುವ , ಅಫ್‌ಲೋಡ್ ಮಾಡಿರುವ ಎಲ್ಲಾ ದಾಖಲಾತಿಗಳ ಜರಾಕ್ಸ್ ಪ್ರತಿಗಳನ್ನು ಇ.ಎಂ.ಡಿ ಮತ್ತು ಅರ್ಜಿ ಶುಲ್ಕದ ಮೂಲ ಡಿ.ಡಿ ಯೊಂದಿಗೆ ದಿನಾಂಕ:18.03.2020 ರಿಂದ ದಿ:19.03.2020ರ ಕಛೇರಿ ಅವಧಿ ಸಮಯ ಬೆಳಗ್ಗೆ 10:00ರಿಂದ ಸಮಯ 17:30ರ ಗಂಟೆಯ ಒಳಗೆ ವಿಭಾಗೀಯ ಕಛೇರಿ ಸಂಚಾರ ಶಾಖೆಯಲ್ಲಿರುವ ಬಾಕ್ಸ್‌ನಲ್ಲಿ ಹಾಕುವುದು.
3) ಕ್ರಮ ಸಂಖ್ಯೆ: 03,08,10ರ ಮಳಿಗೆಯನ್ನು ಪರಿಶಿಷ್ಟ ಜಾತಿಗೆ ಮೀಸಲಿರಿಸಲಾಗಿದೆ.
4) ಕ್ರಮ ಸಂಖ್ಯೆ: 11ರ ಮಳಿಗೆಯನ್ನು ಪರಿಶಿಷ್ಟ ಪಂಗಡಕ್ಕೆ ಮೀಸಲಿರಿಸಲಾಗಿದೆ.
5) ಕ್ರಮ ಸಂಖ್ಯೆ: 02,12ರ ಮಳಿಗೆಯನ್ನು ವಿಕಲಚೇತನರಿಗೆ ಮೀಸಲಿರಿಸಲಾಗಿದೆ.
6) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮೀಸಲಾತಿಗೆ ನಿಗದಿಪಡಿಸಿರುವ ಮಳಿಗೆಗೆ ಭಾಗವಹಿಸುವ ಬಿಡ್‌ದಾರರು, ಸದರಿ ಮೀಸಲಾತಿ ಆಧಾರದಲ್ಲಿ ಬೇರೆ ಮಳಿಗೆಯನ್ನು ಪಡೆಯದಿರುವ ಬಗ್ಗೆ , ಅಪ್‌ಲೋಡ್ ಮಾಡಿರುವ ಸ್ವಯಂ ದೃಢೀಕರಣ ಪತ್ರದ ನಮೂನೆಯಲ್ಲಿ (ಅನುಭಂಧ–2)ನ್ನು ಭರ್ತಿ ಮಾಡಿ ಪೂರ್ಣ ಹೆಸರು, ವಿಳಾಸದೊಂದಿಗೆ ಸಹಿ ಮಾಡಿ ಇ–ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.
7) ವಿಕಲಚೇತನ ಮೀಸಲಾತಿಗೆ ನಿಗದಿಪಡಿಸಿರುವ ಮಳಿಗೆಗೆ ಭಾಗವಹಿಸುವ ಬಿಡ್‌ದಾರರು, ಸದರಿ ಮೀಸಲಾತಿ ಆಧಾರದಲ್ಲಿ ಬೇರೆ ಮಳಿಗೆಯನ್ನು ಪಡೆಯದಿರುವ ಬಗ್ಗೆ, ಅಪ್‌ಲೋಡ್ ಮಾಡಿರುವ ಸ್ವಯಂ ದೃಢೀಕರಣ ಪತ್ರದ ನಮೂನೆಯಲ್ಲಿ (ಅನುಭಂಧ–3)ನ್ನು ಭರ್ತಿ ಮಾಡಿ ಪೂರ್ಣ ಹೆಸರು, ವಿಳಾಸದೊಂದಿಗೆ ಸಹಿ ಮಾಡಿ ಇ–ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.

8) ಟೆಂಡರ್ ಪ್ರಕಟಣೆಯಲ್ಲಿ ಸೂಚಿಸಿರುವ ಮಳಿಗೆಗಳಿಗೆ ಕನಿಷ್ಟ ಮಾಸಿಕ ಪರವಾನಿಗೆ ಶುಲ್ಕವನ್ನು ನಿಗದಿಪಡಿಸಿದ್ದು, ಕನಿಷ್ಠ ಮಾಸಿಕ ಪರವಾನಿಗೆ ಶುಲ್ಕವು ಜಿಎಸ್‌ಟಿ ಹಾಗೂ ಅನ್ವಯಿಸುವ ಇತರ ಶುಲ್ಕವನ್ನು ಒಳಗೊಂಡಿರುವುದಿಲ್ಲ. ಬಿಡ್ಡುದಾರರು ಇ-ಟೆಂಡರ್‌ನಲ್ಲಿ ನಮೂದಿಸುವ ಮೊತ್ತವನ್ನು ಕೇವಲ ಮಾಸಿಕ ಪರವಾನಿಗೆ ಶುಲ್ಕವೆಂದು ಮಾತ್ರ ಪರಿಗಣಿಸಲಾಗುವುದು. ಆಯ್ಕೆಗೊಂಡ H1 ಪರವಾನಿಗೆದಾರರು

ತಾವು ಸೂಚಿಸಿದ ಮಾಸಿಕ ಪರವಾನಿಗೆ ಶುಲ್ಕದ ಮೇಲೆ ಜಿಎಸ್‌ಟಿ ಹಾಗೂ ಅನ್ವಯಿಸುವ ಇತರ ಶುಲ್ಕಗಳನ್ನು ಪ್ರತೀ ಮಾಹೆ ಸಂದಾಯಮಾಡತಕ್ಕದ್ದು.

9) ಇ–ಟೆಂಡರ್‌ನ ಪ್ರಕಟಣೆಯ ಕ್ರಮಸಂಖ್ಯೆ:15ರಲ್ಲಿನ ಮಳಿಗೆಗೆ ಹತ್ತು(10) ವರ್ಷದ ಅವಧಿಗೆ ಪರವಾನಿಗೆ ಅವಧಿ ನಿಗದಿಪಡಿಸಿಲಾಗಿರುತ್ತದೆ. ಸದರಿ ಮಳಿಗೆಗೆ ಭಾಗವಹಿಸುವ ಅರ್ಜಿದಾರರು ಮಳಿಗೆಗೆ ನಿಗದಿಪಡಿಸಿರುವ ವ್ಯವಹಾರದಲ್ಲಿ ಅರ್ಜಿದಾರರು ತಾವು ವ್ಯವಹಾರ ನಡೆಸಲು ಉದ್ದೇಶಿಸಿರುವ ನಿಗದಿತ ವ್ಯವಹಾರವನ್ನು ಟೆಂಡರ್‌ನ ದಾಖಲಾತಿಗಳಲ್ಲಿ ಸ್ಪಷ್ಟವಾಗಿ ನಮೂದಿಸುವುದು. ಟೆಂಡರ್ ಪ್ರಕ್ರಿಯೆ ಮುಗಿದ ನಂತರ ಯಾವುದೇ ಕಾರಣಕ್ಕೂ ಮಳಿಗೆಯ ವ್ಯವಹಾರವನ್ನು ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

10) ಇ–ಟೆಂಡರ್‌ನ ಪ್ರಕಟಣೆಯ ಕ್ರಮಸಂಖ್ಯೆ:16ರಲ್ಲಿನ ದ್ವಿಚಕ್ರ ವಾಹನ ನಿಲುಗಡೆ ಮತ್ತು ಕಾರ್ ನಿಲುಗಡೆ ನಿರ್ವಹಣೆ (ತೆರೆದ/ತಳಅಂತಸ್ತು,ಕಟ್ಟಿದ ಸ್ಥಳ)ಗೆ ಮೂರು(03) ವರ್ಷದ ಅವಧಿಗೆ ಪರವಾನಿಗೆ ಅವಧಿ ನಿಗದಿಪಡಿಸಲಾಗಿದೆ. ಸದರಿ ದ್ವಿಚಕ್ರ ಮತ್ತು ಕಾರ್ ನಿಲುಗಡೆಗೆ ನಿದಿಪಡಿಸಿರುವ ಒಟ್ಟು ವಿಸ್ತೀರ್ಣದಲ್ಲಿ ಶೇ.50ರಷ್ಟು ವಿಸ್ತೀರ್ಣವನ್ನು ಕಾರ್ ನಿಲುಗಡೆಗೆ ಕಡ್ಡಾಯವಾಗಿ ಬಳಸುವುದು.

ಹೆಚ್ಚಿನ ವಿವರಗಳಿಗಾಗಿ ವಿಭಾಗೀಯ ಕಛೇರಿ, ಕ.ರಾ.ರ.ಸಾ.ನಿಗಮ, ಮಂಗಳೂರು ವಿಭಾಗ, ಮಂಗಳೂರು 575004 ಇವರಲ್ಲಿ ಕಛೇರಿ ಸಮಯದಲ್ಲಿ ಸಂಪರ್ಕಿಸಲು ಕೋರಲಾಗಿದೆ ಹಾಗೂ ಸಂಪರ್ಕಿಸುವ ದೂರವಾಣಿ ಸಂಖ್ಯೆ:–

ವಿಭಾಗೀಯ ಸಂಚಾರ ಅಧಿಕಾರಿ–7760990702 & ಸಹಾಯಕ ಸಂಚಾರ ವ್ಯವಸ್ಥಾಪಕರು –7760990711

Last date for submitting application : As per e-procurement portal.

Tender will be opened on : As per e-procurement portal.

ಸಹಿ/–

ವಿಭಾಗೀಯ ನಿಯಂತ್ರಣಾಧಿಕಾರಿ,

ಕ.ರಾ.ರ.ಸಾ.ನಿಗಮ:ಮಂಗಳೂರು ವಿಭಾಗ.

*ಇ-ಟೆಂಡರ್‌ನಲ್ಲಿ ಭಾಗವಹಿಸಲು ಷರತ್ತು ಮತ್ತು ನಿಬಂಧನೆಗಳು (ಸಾ.ಸ್ಥಾ.ಆ. ಸಂ.787/2017 ಮತ್ತು 794/2018ರಂತೆ)*

( ಇ-ಪ್ರೊಕ್ಯೂರ್‌ಮೆಂಟ್ ಮೂಲಕ)

1. ಇ-ಟೆಂಡರ್‌ನಲ್ಲಿ ಭಾಗವಹಿಸುವ ಅರ್ಜಿದಾರರು ಇ-ಪ್ರೊಕ್ಯೂರ್‌ಮೆಂಟ್ ಮುಖಾಂತರ ಮಾತ್ರ ಅರ್ಜಿ ಸಲ್ಲಿಸುವುದು ಹಾಗೂ ನೇರವಾಗಿ ಸಲ್ಲಿಸುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.
2. ಇ-ಟೆಂಡರ್‌ನಲ್ಲಿ ಭಾಗವಹಿಸುವ ಅರ್ಜಿದಾರರು ಟೆಂಡರ್‌ಗೆ ನಿಗದಿಪಡಿಸಿದ ಅವಧಿಯೊಳಗೆ ಅರ್ಜಿ ಸಲ್ಲಿಸುವುದು ಸದರಿ ಸಮಯದಲ್ಲಿ ಉಂಟಾಗುವ ಯಾವುದೇ ತಾಂತ್ರಿಕ ದೋಷಗಳಿಗೆ ಕ.ರಾ.ರ.ಸಾ.ನಿಗಮವು ಜವಾಬ್ದಾರಿಯಾಗಿರುವುದಿಲ್ಲ.
3. ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್‌ಗೆ ಭಾಗವಹಿಸುವ ಬಿಡ್‌ದಾರರು ತಮ್ಮ ಸ್ವಂತ ಖರ್ಚಿನಲ್ಲಿ ಟೆಂಡರ್ ನಿಯಮಾವಳಿಗಳನ್ನು ಪೂರೈಸುವುದು.
4. ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಟೆಂಡರ್‌ಗೆ ಭಾಗವಹಿಸುವ ಅರ್ಜಿದಾರರು ಅರ್ಜಿ ಸಲ್ಲಿಸುವ ಮೊದಲು ತಮ್ಮ ಸ್ವಂತ ಖರ್ಚಿನಲ್ಲಿ ಆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ ನಂತರವೇ ಬಿಡ್ ಮೊತ್ತ ದಾಖಲಿಸುವುದು ಬಿಡ್‌ದಾರರ ಜವಾಬ್ದಾರಿಯಾಗಿರುತ್ತದೆ.
5. ಟೆಂಡರ್‌ನ ಕ್ರಮಸಂಖ್ಯೆ:15ರಲ್ಲಿನ ಮಳಿಗೆಗೆ ಭಾಗವಹಿಸುವ ಅರ್ಜಿದಾರರು ಸದರಿ ಮಳಿಗೆಗೆ ನಿಗದಿಪಡಿಸಿರುವ ವ್ಯವಹಾರದಲ್ಲಿ ಅರ್ಜಿದಾರರು ತಾವು ವ್ಯವಹಾರ ನಡೆಸಲು ಉದ್ದೇಶಿಸಿರುವ ನಿಗದಿತ ವ್ಯವಹಾರವನ್ನು ಟೆಂಡರ್‌ನ ದಾಖಲಾತಿಗಳಲ್ಲಿ ಸ್ಪಷ್ಟವಾಗಿ ನಮೂದಿಸುವುದು. ಟೆಂಡರ್ ಪ್ರಕ್ರಿಯೆ ಮುಗಿದ ನಂತರ ಯಾವುದೇ ಕಾರಣಕ್ಕೂ ಮಳಿಗೆಯ ವ್ಯವಹಾರವನ್ನು ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
6. ಇ-ಟೆಂಡರ್‌ನ ಪ್ರಕಟಣೆಯ ಕ್ರಮಸಂಖ್ಯೆ:16ರಲ್ಲಿನ ದ್ವಿಚಕ್ರ ವಾಹನ ನಿಲುಗಡೆ ಮತ್ತು ಕಾರ್ ನಿಲುಗಡೆ ನಿರ್ವಹಣೆ (ತೆರೆದ/ತಳಅಂತಸ್ತು,ಕಟ್ಟಿದ ಸ್ಥಳ) ಗೆ ಮೂರು(03) ವರ್ಷದ ಅವಧಿಗೆ ಪರವಾನಿಗೆ ಅವಧಿ ನಿಗದಿಪಡಿಸಲಾಗಿದೆ. ಸದರಿ ದ್ವಿಚಕ ವಾಹನ ಮತ್ತು ಕಾರ್ ನಿಲುಗಡೆಗೆ ನಿದಿಪಡಿಸಿರುವ ಒಟ್ಟು ವಿಸ್ತೀರ್ಣದಲ್ಲಿ ಶೇ.50ರಷ್ಟು ವಿಸ್ತೀರ್ಣವನ್ನು ಕಾರ್ ನಿಲುಗಡೆಗೆ ಕಡ್ಡಾಯವಾಗಿ ಬಳಸುವುದು.
7. ವಾಣಿಜ್ಯ ಮಳಿಗೆಗಳು ಯಾವ ಯಾವ ಸ್ಥಿತಿಯಲ್ಲಿವೆಯೋ ಹಾಗೇಯೇ ನೀಡಲಾಗುವುದು ಮತ್ತು ಟೆಂಡರ್‌ನಲ್ಲಿ ನೀಡಿರುವ/ನಮೂದಿಸಿರುವ ಸ್ಥಳದಲ್ಲಿ ಮಾತ್ರ ವ್ಯವಹಾರ ನಡೆಸತಕ್ಕದ್ದು ಹಾಗೂ ಮಳಿಗೆಯ ಮೂಲ ಸ್ವರೂಪಕ್ಕೆ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
8. **ಟೆಂಡರ್ ಅರ್ಜಿ ಶುಲ್ಕ, ಇ-ಪ್ರೊಕ್ಯೂರ್‌ಮೆಂಟ್ ಶುಲ್ಕ ಹಾಗೂ ಇ.ಎಂ.ಡಿ. ಮೊತ್ತ:**
    1. ಇ-ಟೆಂಡರ್ ಪ್ರಕಟಣೆಯಲ್ಲಿ ಮಳಿಗೆಗಳಿಗೆ ನಿಗದಿಪಡಿಸಿದ ಇ.ಎಂ.ಡಿ ಮೊತ್ತದಲ್ಲಿ ರೂ.500-00 ಗಳನ್ನು ಮಾತ್ರ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಪಾವತಿಸುವುದು ಇನ್ನುಳಿದ ಇ.ಎಂ.ಡಿ. ಮೊತ್ತವನ್ನು Divisional Controller, K.S.R.T.C, Mangaluru Division, Mangaluru ರವರ ಪದನಾಮಕ್ಕೆ ಡಿ.ಡಿ. ರೂಪದಲ್ಲಿ ಪಡೆದು ಸದರಿ ಡಿ.ಡಿಯ ಹಿಂಭಾಗದಲ್ಲಿ ತಮ್ಮ ಹೆಸರು, ಬಿಡ್ ಮಾಡುವ ಮಳಿಗೆಯ ಹೆಸರು & ಮಳಿಗೆಯ ಸಂಖ್ಯೆಯನ್ನು ನಮೂದಿಸಿ, ಸದರಿ ಡಿ.ಡಿಯ ಜರಾಕ್ಸ್ ಪ್ರತಿಯನ್ನು ಇತರೆ ದಾಖಲಾತಿಗಳೊಂದಿಗೆ ಇ-ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ..
    2. ಇ-ಪ್ರೊಕ್ಯೂರ್‌ಮೆಂಟ್‌ನಲ್ಲಿ ಅಫ್‌ಲೋಡ್ ಮಾಡಿರುವ ಎಲ್ಲಾ ದಾಖಲಾತಿಗಳನ್ನು ಹಾಗೂ ಇ.ಎಂ.ಡಿ ಮತ್ತು ಅರ್ಜಿ ಶುಲ್ಕದ ಮೂಲ ಡಿ.ಡಿಯೊಂದಿಗೆ ದಾಖಲಾತಿಗಳನ್ನು ಮುಚ್ಚಿದ ಲಕೋಟೆಯಲ್ಲಿ ಹಾಕಿ ಭಾಗವಹಿಸುವ ಮಳಿಗೆಯ ಹೆಸರು ಅರ್ಜಿದಾರರ ಹೆಸರನ್ನು ನಮೂದಿಸಿ ದಿನಾಂಕ:18.03.2020 ರಿಂದ ದಿ:19.03.2020ರ ಕಛೇರಿ ಅವಧಿ ಸಮಯ ಬೆಳಗ್ಗೆ 10:00ರಿಂದ ಸಮಯ 17:30ರ ಗಂಟೆಯ ವಿಭಾಗೀಯ ಕಛೇರಿ ಸಂಚಾರ ಶಾಖೆಯಲ್ಲಿ ಇಟ್ಟಿರುವ ಬಾಕ್ಸ್‌ನಲ್ಲಿ ಹಾಕುವುದು.
    3. The tenderer shall pay E-tender processing fee and EMD through e-procurement following four modes of payment: a) Debit Card, b) Credit Card, c) OTC (Over the counter) and NEFT (National Electronic fund transfer).
    4. The tenderer shall pay E-tender processing fee Rs.500/-through e-procurement following four modes of payment: a) Debit Card, b) Credit Card, c) OTC (Over the counter) and NEFT (National Electronic fund transfer).

5. ಮಳಿಗೆಗಳಿಗೆ ನಿಗದಿಪಡಿಸಿದ ಮಾಸಿಕ ಮಿತವ್ಯಯ ಪರವಾನಗಿ ಶುಲ್ಕದ ಮೂರು (03) ಪಟ್ಟು ಮೊತ್ತವನ್ನು ಇ.ಎಂ.ಡಿ. (Earnest Money Deposit)ಯನ್ನಾಗಿ ನಿಗದಿಪಡಿಸಲಾಗಿರುತ್ತದೆ.

6. ಟೆಂಡರ್ ಪ್ರಕಟಣೆಯಲ್ಲಿ ನಿಗದಿಪಡಿಸಿರುವ ಇ.ಎಂ.ಡಿ.ಮೊತ್ತಕ್ಕೆ, ಟೆಂಡರ್ ಪ್ರಕಟಣೆಯ ದಿನಾಂಕದ ನಂತರದ ಅವಧಿಯಲ್ಲಿ ಪಡೆದುಕೊಂಡಿರುವ ಡಿ.ಡಿ.ಯನ್ನು ಮಾತ್ರ ಪರಿಗಣಿಸಲಾಗುವುದು.

7. ಇ-ಟೆಂಡರ್ ಪ್ರಕಟಣೆಯಲ್ಲಿ ಮಳಿಗೆಗಳಿಗೆ ಕನಿಷ್ಟ ಮಾಸಿಕ ಪರವಾನಿಗೆ ಶುಲ್ಕವನ್ನು ನಿಗದಿಪಡಿಸಿದ್ದು ಸದರಿ ಕನಿಷ್ಟ ಮಾಸಿಕ ಪರವಾನಿಗೆ ಶುಲ್ಕವು ಜಿಎಸ್‌ಟಿ ಹಾಗೂ ಅನ್ವಯಿಸುವ ಇತರ ಶುಲ್ಕವನ್ನು ಒಳಗೊಂಡಿರುವುದಿಲ್ಲ. ಬಿಡ್ಡುದಾರರು ಇ-ಟೆಂಡರ್‌ನಲ್ಲಿ ನಮೂದಿಸುವ ಮೊತ್ತವನ್ನು ಕನಿಷ್ಟ ಮಾಸಿಕ ಪರವಾನಿಗೆ ಶುಲ್ಕವೆಂದು ಪರಿಗಣಿಸಲಾಗುವುದು. ಆಯ್ಕೆಗೊಂಡ H1 ಪರವಾನಿಗೆದಾರರು ತಾವು ಸೂಚಿಸಿದ ಪರವಾನಿಗೆ ಶುಲ್ಕಕ್ಕೆ ಜಿಎಸ್‌ಟಿ ಹಾಗೂ ಅನ್ವಯಿಸುವ ಇತರ ಶುಲ್ಕಗಳನ್ನು ಸಂದಾಯಮಾಡತಕ್ಕದ್ದು.

8. ಇ.ಎಂ.ಡಿ. ಮೊತ್ತಕ್ಕೆ ಯಾವುದೇ ಬಡ್ಡಿಯನ್ನು ನೀಡಲಾಗುವುದಿಲ್ಲ.

9. ಪೋರ್ಟಲ್‌ನಲ್ಲಿ ಅಪಲೋಡ್ ಮಾಡಿದ ಮಳಿಗೆಗೆ ಸಂಬಂಧಿಸಿದ ವಿವರಗಳನ್ನು ಸಂಪೂರ್ಣವಾಗಿ ಓದಿ ಅರ್ಥೈಸಿಕೊಂಡಿರುವ ಬಗ್ಗೆ ಹಾಗೂ ಎಲ್ಲಾ ಷರತ್ತು ಮತ್ತು ನಿಬಂಧನೆಗಳನ್ನು ಒಪ್ಪಿರುವ ಬಗ್ಗೆ ಎಲ್ಲಾ ಪುಟಗಳ ಷರತ್ತು ಮತ್ತು ನಿಭಂಧನೆಗಳ ಪ್ರತಿಯಲ್ಲಿ, ಟೆಂಡರ್‌ದಾರರು/ಅರ್ಜಿದಾರರು/ಬಿಡ್‌ದಾರರು ಸಹಿ ಮಾಡಿ, ಇ-ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವುದು.

10. ಮೀಸಲಾತಿ ಅಡಿಯಲ್ಲಿ ನಿಗದಿಪಡಿಸಿರುವ ಮಳಿಗೆಗೆ ಭಾಗವಹಿಸುವ ಬಿಡ್‌ದಾರರು/ಅರ್ಜಿದಾರರು ಮೀಸಲಾತಿಗೆ ಸಂಬಂಧಿಸಿದ ದಾಖಲೆಗಳನ್ನು ಇ-ಪ್ರಕ್ಯೂರ್‌ಮೆಂಟ್ ಮೂಲಕ ಅಪ್‌ಲೋಡ್ ಮಾಡುವುದು.

11. ಬಿಡ್‌ದಾರರು/ಅರ್ಜಿದಾರರು ಒಂದು ಮಳಿಗೆಗೆ ಒಂದಕ್ಕಿಂತ ಹೆಚ್ಚಿನ ಬಿಡ್‌ಗಳನ್ನು ಸಲ್ಲಿಸಲು ಅವಕಾಶವಿರುವುದಿಲ್ಲ.

12. ಒಂದು ವೇಳೆ ಬಿಡ್‌ದಾರರು/ಅರ್ಜಿದಾರರು ಇ-ಪೋರ್ಟ್‌ಲ್‌ನ ಆರ್ಥಿಕ ಬಿಡ್‌ನಲ್ಲಿ ಮತ್ತು ನಿಗದಿತ ನಮೂನೆಯಲ್ಲಿ ನಮೂದಿಸಿದ ಬಿಡ್ ಮೊತ್ತ ಬೇರೆ ಬೇರೆ ಆಗಿದ್ದಲ್ಲಿ, ಇ-ಪೋರ್ಟ್‌ಲ್‌ನ ಆರ್ಥಿಕ ಬಿಡ್ ಮೊತ್ತವನ್ನು ಪರಿಗಣಿಸಲಾಗುವುದು.

13. ಬಿಡ್‌ದಾರರ/ಅರ್ಜಿದಾರರ ಷರತ್ತಿನ ಟೆಂಡರ್‌ಗಳನ್ನು ಪರಿಗಣಿಸಲು ಅವಕಾಶವಿರುವುದಿಲ್ಲ. ಯಾವುದೇ ಷರತ್ತುಗಳು ಇಲ್ಲದೆ ಟೆಂಡರ್ ನಿಯಮಗಳನ್ನು ಪಾಲಿಸಿರುವ ಅರ್ಹ ಟೆಂಡರ್‌ಗಳನ್ನು ಮಾತ್ರ ಅಂಗೀಕರಿಸಲಾಗುವುದು. **ಹಾಗೂ ಅರ್ಜಿಯೊಂದಿಗೆ ಅಳವಡಿಸಿರುವ ಚೆಕ್‌ಲಿಸ್ಟ್‌ನ್ನು ಭರ್ತಿಮಾಡಿ ಸಹಿ ಮಾಡಿ ಅಪ್‌ಲೋಡ್ ಮಾಡುವುದು.**

**9) ಬಿಡ್‌ದಾರರು/ಅರ್ಜಿದಾರರು ಕೆಳಕಂಡ ಅಗತ್ಯ ದಾಖಲೆಗಳನ್ನು ಇ-ಪ್ರೊಕ್ಯೂರ್‌ಮೆಂಟ್‌ನಲ್ಲಿ ಅಪ್‌ಲೋಡ್ ಮಾಡಬೇಕಿರುತ್ತದೆ.**

| ರೂ.5.00 ಲಕ್ಷಗಳಿಗಿಂತ ಕಡಿಮೆ ಮಾಸಿಕ ಪರವಾನಗಿ ಶುಲ್ಕವಿರುವ ವಾಣಿಜ್ಯ ಮಳಿಗೆಗಳಿಗೆ | ರೂ.5.00 ಲಕ್ಷ ಅಥವಾ ಹೆಚ್ಚಿನ ಮಾಸಿಕ ಪರವಾನಗಿ ಶುಲ್ಕವಿರುವ ವಾಣಿಜ್ಯ ಮಳಿಗೆಗಳಿಗೆ |
|---|---|
| ಅ) ವಿಳಾಸ ದೃಢೀಕರಣ ಪತ್ರ (Voter ID, Aadhaar Card, Bank Passbook, Passport, etc.)<br>ಆ) ಬಿಡ್‌ದಾರರು ಪಾಲುದಾರಿಕೆ ವ್ಯವಹಾರ ಸಂಸ್ಥೆಯನ್ನು ಹೊಂದಿದ್ದಲ್ಲಿ, ಭಾರತೀಯ ಪಾಲುದಾರಿಕೆ ಕಾಯ್ದೆಯಡಿಯಲ್ಲಿ ನೋಂದಣಿಯಾಗಿರುವ ದಾಖಲಾತಿ, ಬಿಡ್ ಸಹಿಗೊಳಿಸುವ ವ್ಯಕ್ತಿಯು ಪಾಲುದಾರಿಕೆಯ ಸಂಸ್ಥೆಯಲ್ಲಿ ವ್ಯವಸ್ಥಾಪಕ ಪಾಲುದಾರನಾಗಿರುವ ಬಗ್ಗೆ ದಾಖಲಾತಿಯನ್ನು ಸಲ್ಲಿಸಬೇಕು. ಪಾಲುದಾರಿಕೆಯಲ್ಲಿರುವ ಎಲ್ಲಾ ನಿರ್ದೇಶಕರು / ಪಾಲುದಾರರ ಪೂರ್ಣ ವಿಳಾಸದ ಮಾಹಿತಿಯನ್ನು ಸಲ್ಲಿಸಬೇಕು.<br>ಇ) ಬಿಡ್‌ದಾರರು ಕಂಪನಿ / ವ್ಯವಹಾರ | ಅ) ಕಂಪನಿ / ವ್ಯಕ್ತಿಯ ವಿಳಾಸ ದೃಢೀಕರಣ ಪತ್ರ (Voter ID, Aadhaar Card, Bank Passbook, Passport, etc)<br>ಆ) ಆದಾಯ ತೆರಿಗೆ ತೀರುವಳಿ ಪತ್ರ.<br>ಇ) ನಿಗದಿತ ಮಾಸಿಕ ಪರವಾನಗಿ ಶುಲ್ಕಕ್ಕಿಂತ ಹೆಚ್ಚಿನ ವಹಿವಾಟು ನಡೆಸಿರುವ ಬಗ್ಗೆ, 02 ವರ್ಷದ ವಾರ್ಷಿಕ ವಹಿವಾಟಿನ ದಾಖಲೆಗಳನ್ನು ಲೆಕ್ಕಪರಿಶೋಧಕರಿಂದ ದೃಢೀಕರಿಸಿ ನೀಡುವುದು.<br>ಈ) ಬಿಡ್‌ದಾರರು ಪಾಲುದಾರಿಕೆ ವ್ಯವಹಾರ ಸಂಸ್ಥೆಯನ್ನು ಹೊಂದಿದ್ದಲ್ಲಿ, ಭಾರತೀಯ ಪಾಲುದಾರಿಕೆ ಕಾಯ್ದೆಯಡಿಯಲ್ಲಿ ನೋಂದಣಿಯಾಗಿರುವ ದಾಖಲಾತಿ, ಬಿಡ್ ಸಹಿಗೊಳಿಸುವ ವ್ಯಕ್ತಿಯು ಪಾಲುದಾರಿಕೆಯ ಸಂಸ್ಥೆಯಲ್ಲಿ ವ್ಯವಸ್ಥಾಪಕ ಪಾಲುದಾರನಾಗಿರುವ ಬಗ್ಗೆ ದಾಖಲಾತಿಯನ್ನು ಸಲ್ಲಿಸಬೇಕು. ಪಾಲುದಾರಿಕೆಯಲ್ಲಿರುವ ಎಲ್ಲಾ ನಿರ್ದೇಶಕರು / ಪಾಲುದಾರರ |

| | |
|---|---|
| ಸಂಸ್ಥೆಯ ಹೆಸರಿನಲ್ಲಿ ಬಿಡ್ ಮಾಡಿದ್ದಲ್ಲಿ, ಕಂಪನಿಯು ಇಂಡಿಯನ್ ಕಂಪನೀಸ್ ಕಾಯ್ದೆಯಡಿಯಲ್ಲಿ ನೋಂದಣಿಯಾಗಿರುವ ದಾಖಲಾತಿಯನ್ನು ಸಲ್ಲಿಸಬೇಕು.<br>ಈ) **ಬಿಡ್‌ದಾರರು ಕ.ರಾ.ರ.ಸಾ.ನಿಗಮ ಮತ್ತು ಇತರೆ ನಿಗಮಗಳಲ್ಲಿ Defaulter ಆಗದೆ ಇರುವ ಬಗ್ಗೆ ಹಾಗೂ ಕಪ್ಪುಪಟ್ಟಿಗೆ ಸೇರಿಲ್ಲದಿರುವ ಬಗ್ಗೆ ಸ್ವಯಂ-ದೃಡೀಕರಣ ಪತ್ರ**<br>ಉ) ಪಾನ್ ಕಾರ್ಡ್ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ. | ಪೂರ್ಣ ವಿಳಾಸದ ಮಾಹಿತಿಯನ್ನು ಸಲ್ಲಿಸಬೇಕು.<br>ಉ) ಬಿಡ್‌ದಾರರು ಕಂಪನಿ / ವ್ಯವಹಾರ ಸಂಸ್ಥೆಯ ಹೆಸರಿನಲ್ಲಿ ಬಿಡ್ ಮಾಡಿದ್ದಲ್ಲಿ, ಕಂಪನಿಯು ಇಂಡಿಯನ್ ಕಂಪನೀಸ್ ಕಾಯ್ದೆಯಡಿಯಲ್ಲಿ ನೋಂದಣಿಯಾಗಿರುವ ದಾಖಲಾತಿಯನ್ನು ಸಲ್ಲಿಸಬೇಕು.<br>ಊ) ವಹಿವಾಟಿಗೆ ಪೂರಕವಾಗಿ ಕಳೆದ 02 ವರ್ಷದ ಲಾಭ / ನಷ್ಟದ ಲೆಕ್ಕಾಚಾರದ ದಾಖಲೆಗಳು ಮತ್ತು ಬ್ಯಾಲೆನ್ಸ್ ಶೀಟ್ ಪ್ರತಿಗಳನ್ನು ಲೆಕ್ಕಪರಿಶೋಧಕರಿಂದ ದೃಢೀಕರಿಸಿ ನೀಡುವುದು.<br>ಋ) ಬಿಡ್‌ದಾರರು ಕ.ರಾ.ರ.ಸಾ.ನಿಗಮ ಮತ್ತು ಇತರೆ ನಿಗಮಗಳಲ್ಲಿ Defaulter ಆಗದೆ ಇರುವ ಬಗ್ಗೆ ಹಾಗೂ ಕಪ್ಪುಪಟ್ಟಿಗೆ ಸೇರಿಲ್ಲದಿರುವ ಬಗ್ಗೆ ಸ್ವಯಂ ದೃಢೀಕರಣ ಪತ್ರ |

10. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಮೀಸಲಿಟ್ಟ ಮಳಿಗೆಗಳಲ್ಲಿ, ಒಬ್ಬ ಬಿಡ್‌ದಾರರು ಒಂದು ಮಳಿಗೆಯನ್ನು ಮಾತ್ರ ಮೀಸಲಾತಿ ಆಧಾರದ ಮೇಲೆ ಪಡೆಯಲು ಅವಕಾಶವಿದೆ. ನಾಲ್ಕು ರಾಜ್ಯ ಸಾರಿಗೆ ನಿಗಮ/ಸಂಸ್ಥೆ ವ್ಯಾಪ್ತಿಯ ಬಸ್ ನಿಲ್ದಾಣಗಳಲ್ಲಿ ಮತ್ತು ಇತರೆ ಸರ್ಕಾರಿ ಇಲಾಖೆಗಳಲ್ಲಿ ಯಾವುದೇ ಮಳಿಗೆ/ಜಾಹೀರಾತು ಪರವಾನಗಿಯನ್ನು ಮೀಸಲಾತಿ ಆಧಾರದ ಮೇಲೆ ಪಡೆದಿರುವುದಿಲ್ಲ ಎಂಬ ಬಗ್ಗೆ **ಸ್ವಯಂ-ದೃಢೀಕರಣವನ್ನು** ಬಿಡ್‌ದಾರರು ಇ-ಟೆಂಡರ್‌ನಲ್ಲಿ ಅಪ್‌ಲೋಡ್ ಮಾಡುವುದು. ಈ ನಿಯಮವನ್ನು ಟೆಂಡರ್‌ನಲ್ಲಿ ಭಾಗವಹಿಸುವ ಬಿಡ್‌ದಾರರು ಉಲ್ಲಂಘಿಸಿರುವುದು, ಯಾವುದೇ ಹಂತದಲ್ಲಿ ಕಂಡು ಬಂದಲ್ಲಿ, ಇ.ಎಂ.ಡಿ./ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಂಡು ಆಯ್ಕೆ/ಕರಾರನ್ನು ರದ್ದುಗೊಳಿಸಲಾಗುವುದು.
11. ಅಂಧರು ಮತ್ತು ವಿಕಲಚೇತನರಿಗೆ ಮೀಸಲಿಟ್ಟ ಮಳಿಗೆಗಳನ್ನು, ಒಬ್ಬ ಬಿಡ್‌ದಾರರು ಒಂದು ಮಳಿಗೆಯನ್ನು ಮಾತ್ರ ಮೀಸಲಾತಿ ಆಧಾರದ ಮೇಲೆ ಪಡೆಯಲು ಅವಕಾಶವಿದೆ. ನಾಲ್ಕು ರಾಜ್ಯ ಸಾರಿಗೆ ನಿಗಮ/ಸಂಸ್ಥೆ ವ್ಯಾಪ್ತಿಯ ಬಸ್ ನಿಲ್ದಾಣಗಳಲ್ಲಿ ಮತ್ತು ಇತರೆ ಸರ್ಕಾರಿ ಇಲಾಖೆಗಳಲ್ಲಿ ಯಾವುದೇ ಮಳಿಗೆಗಳ ಪರವಾನಗಿಯನ್ನು ಮೀಸಲಾತಿ ಆಧಾರದ ಮೇಲೆ ಪಡೆದಿರುವುದಿಲ್ಲ ಎಂಬ ಬಗ್ಗೆ **ಸ್ವಯಂ-ದೃಢೀಕರಣವನ್ನು** ಬಿಡ್‌ದಾರರು ಇ-ಟೆಂಡರ್‌ನಲ್ಲಿ ಅಪ್‌ಲೋಡ್ ಮಾಡುವುದು. ಈ ನಿಯಮವನ್ನು ಟೆಂಡರ್‌ನಲ್ಲಿ ಭಾಗವಹಿಸುವ ಬಿಡ್‌ದಾರರು ಉಲ್ಲಂಘಿಸಿರುವುದು ಯಾವುದೇ ಹಂತದಲ್ಲಿ ಕಂಡು ಬಂದಲ್ಲಿ, ಇ.ಎಂ.ಡಿ/ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಂಡು ಆಯ್ಕೆ/ಕರಾರನ್ನು ರದ್ದುಗೊಳಿಸಲಾಗುವುದು.
12. ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಅರ್ಜಿಸಲ್ಲಿಸಿ, ಅತಿ ಹೆಚ್ಚಿನ ಮೊತ್ತವನ್ನು ಬಿಡ್ ಮಾಡಿರುವ ಮತ್ತು ಸಮರ್ಪಕ ದಾಖಲೆಗಳನ್ನು ಸಲ್ಲಿಸಿರುವ ಬಿಡ್‌ದಾರರನ್ನು ಪರವಾನಗಿದಾರರನ್ನಾಗಿ ಆಯ್ಕೆ ಮಾಡಲಾಗುವುದು.
13. ಭಾರತ ಸರ್ಕಾರ / ಕರ್ನಾಟಕ ಸರ್ಕಾರ / ಕ.ರಾ.ರ.ಸಾ.ನಿಗಮವು ಆಗಿಂದಾಗ್ಗೆ ವಿಧಿಸುವ / ಕಾಲ ಕಾಲಕ್ಕೆ ಬದಲಾಗುವ ಷರತ್ತು / ನಿಬಂಧನೆಗಳಿಗೆ ಪರವಾನಗಿದಾರರು ಬದ್ಧರಾಗಿರಬೇಕು.\
14. <u>**ಪರವಾನಗಿ ಅವಧಿ:**</u>

ನಿಗಮದಲ್ಲಿನ ಮಳಿಗೆಗಳನ್ನು ಈ ಕೆಳಕಂಡಂತೆ ಪರವಾನಿಗೆ ನೀಡಲಾಗುವುದು.

| ಕ್ರ. ಸಂ. | ಮಳಿಗೆ ಮಾದರಿ/ಸ್ಥಳ | ಪರವಾನಗಿ ಅವಧಿ |
|---|---|---|
| 1 | ತೆರೆದ ಸ್ಥಳದಲ್ಲಿನ ಮಳಿಗೆಗಳು | 3 ವರ್ಷಗಳು |
| 2 | ಕಟ್ಟಿದ ಮಳಿಗೆಗಳು | 5 ವರ್ಷಗಳು |
| 3 | ಡಾರ್ಮಿಟರಿ / ಲಾಡ್ಜಿಂಗ್ / ಕಛೇರಿ ಉದ್ದೇಶಕ್ಕಾಗಿ / ಮೊಬೈಲ್ ಟವರ್ಸ್ | 10 ವರ್ಷಗಳು |

15) <u>ಭದ್ರತಾ ಠೇವಣಿ:</u>

I. ಕೆಳಕಂಡಂತೆ ನಿಗದಿತ ಭದ್ರತಾ ಠೇವಣಿ ಮೊತ್ತವನ್ನು ರಾಷ್ಟ್ರೀಕೃತ / ಶೆಡ್ಯೂಲ್ ಬ್ಯಾಂಕ್‌ನಿಂದ ಪಡೆದ ಡಿ.ಡಿ. / RTGS / NEFT ಮೂಲಕ ಪಾವತಿ ಮಾಡುವುದು.

| ಕ್ರ.ಸಂ. | ಪರವಾನಗಿ ಅವಧಿ | ಒಟ್ಟು ಪಾವತಿಸಬೇಕಿರುವ ಭದ್ರತಾ ಠೇವಣಿ |
|---|---|---|
| 1 | 3 ವರ್ಷ | ಅಂಗೀಕೃತ ಮಾಸಿಕ ಪರವಾನಗಿ ಶುಲ್ಕದ 6 ಪಟ್ಟು |
| 2 | 5 ವರ್ಷ | ಅಂಗೀಕೃತ ಮಾಸಿಕ ಪರವಾನಗಿ ಶುಲ್ಕದ 8 ಪಟ್ಟು |
| 3 | 10 ವರ್ಷ | ಅಂಗೀಕೃತ ಮಾಸಿಕ ಪರವಾನಗಿ ಶುಲ್ಕದ 10 ಪಟ್ಟು |

II. ಪರವಾನಗಿದಾರರು RTGS / NEFT ಮೂಲಕ ಪಾವತಿ ಮಾಡುವಾಗ ಬಸ್ ನಿಲ್ದಾಣ, ಮಳಿಗೆ ಸಂಖ್ಯೆ, ಪರವಾನಗಿದಾರರ ಹೆಸರನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.

III. ಭದ್ರತಾ ಠೇವಣಿ ಮೊತ್ತವನ್ನು ಡಿ.ಡಿ. ರೂಪದಲ್ಲಿ ಸಲ್ಲಿಸುವಾಗ Divisional Controller, K.S.R.T.C, Mangaluru Division ರವರ ಪದನಾಮಕ್ಕೆ ಡಿ.ಡಿ.ಪಡೆದು ಈ ಕಛೇರಿಗೆ ಸಲ್ಲಿಸುವುದು.

IV. ಭದ್ರತಾ ಠೇವಣಿಗೆ ಯಾವುದೇ ಬಡ್ಡಿಯನ್ನು ನೀಡಲಾಗುವುದಿಲ್ಲ.

V.ಆಯ್ಕೆಗೊಂಡ ಪರವಾನಗಿದಾರರ ಇ.ಎಂ.ಡಿ. ಮೊತ್ತವನ್ನು ಭದ್ರತಾ ಠೇವಣಿ ಮೊತ್ತಕ್ಕೆ ಹೊಂದಾಣಿಕೆ ಮಾಡಿಕೊಂಡು, ಉಳಿಕೆ ಭದ್ರತಾ ಠೇವಣಿ ಮೊತ್ತವನ್ನು ಪಾವತಿಸಿಕೊಳ್ಳಲಾಗುವುದು.

VI. ಪರವಾನಗಿ ಅವಧಿ ಮುಕ್ತಾಯವಾದ ನಂತರ ನಿಗಮಕ್ಕೆ ಪಾವತಿಸಬೇಕಾದ ಬಾಕಿ ಶುಲ್ಕಗಳನ್ನು ಕಡಿತಗೊಳಿಸಿ ಉಳಿದ ಭದ್ರತಾ ಠೇವಣಿಯನ್ನು ಪರವಾನಗಿದಾರರಿಗೆ ಹಿಂತಿರುಗಿಸಲಾಗುವುದು.

16). **<u>ಕರಾರು ಒಪ್ಪಂದ:</u>**

I. ಟೆಂಡರ್‌ನಲ್ಲಿ ಆಯ್ಕೆಯಾದ ಬಿಡ್‌ದಾರರು, ಆಯ್ಕೆ ಪತ್ರ ತಲುಪಿದ ದಿನಾಂಕದಿಂದ 07 ದಿನಗಳೊಳಗಾಗಿ ನಿಗದಿತ ಭದ್ರತಾ ಠೇವಣಿ ಮತ್ತು ಒಂದು ತಿಂಗಳ ಮುಂಗಡ ಮಾಸಿಕ ಪರವಾನಗಿ ಶುಲ್ಕವನ್ನು ಪಾವತಿಸಿ, ಕರ್ನಾಟಕ ಸ್ಟ್ಯಾಂಪ್ ಕಾಯಿದೆ ಪ್ರಕಾರ ಸೂಕ್ತ ಮೌಲ್ಯದ ಛಾಪಾ ಕಾಗದದ ಮೇಲೆ ಕರಾರು ಒಪ್ಪಂದ ಮಾಡಿಕೊಳ್ಳಬೇಕು.

II. ಆಯ್ಕೆಯಾದ ಬಿಡ್‌ದಾರರು, ಆಯ್ಕೆ ಪತ್ರ ತಲುಪಿದ 07 ದಿನಗಳೊಳಗೆ ಕರಾರು ಒಪ್ಪಂದ ಮಾಡಿಕೊಳ್ಳುವಲ್ಲಿ ವಿಫಲರಾದಲ್ಲಿ, ಸದರಿ ಬಿಡ್‌ದಾರರ ಇ.ಎಂ.ಡಿ. ಮೊತ್ತವನ್ನು ನಿಗಮಕ್ಕೆ ಆದ ನಷ್ಟಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

17) **<u>ಮಾಸಿಕ ಪರವಾನಗಿ ಶುಲ್ಕ ಮತ್ತು ಸರಕು & ಸೇವಾ ತೆರಿಗೆ (GST) ಪಾವತಿ:</u>**

I. ಪರವಾನಗಿದಾರರು ಕರಾರು ಒಪ್ಪಂದ ಪ್ರಾರಂಭದ ಮಾಹೆಯ ಮುಂಗಡ ಮಾಸಿಕ ಪರವಾನಗಿ ಶುಲ್ಕವನ್ನು ಡಿ.ಡಿ. ಮೂಲಕ ಭದ್ರತಾ ಠೇವಣಿ ಜೊತೆ ಸಲ್ಲಿಸುವುದು.

II. ಪರವಾನಗಿದಾರರು ಪ್ರತಿ ಮಾಹೆ 07 ನೇ ತಾರೀಖಿನೊಳಗಾಗಿ ಮಾಸಿಕ ಪರವಾನಗಿ ಶುಲ್ಕ ಮತ್ತು ಸರಕು & ಸೇವಾ ತೆರಿಗೆ ಶುಲ್ಕವನ್ನು, ಪ್ರಸ್ತುತ ಶೇ.18, ಮುಂಗಡವಾಗಿ ನಿಗಮಕ್ಕೆ ಪಾವತಿಸಬೇಕು.

III. ಪರವಾನಗಿದಾರರು ಮಾಸಿಕ ಪರವಾನಗಿ ಶುಲ್ಕ ಮತ್ತು ಸರಕು & ಸೇವಾ ತೆರಿಗೆ ಪಾವತಿಸಲು ಇನ್‌ವಾಯ್ಸ್ ಅನ್ನು ಪ್ರತಿ ತಿಂಗಳ 3ನೇ ತಾರೀಖಿನೊಳಗೆ ಪಡೆದುಕೊಳ್ಳುವುದು.

IV. ಇನ್‌ವಾಯ್ಸ್‌ನಲ್ಲಿ ನಮೂದಿಸಿದ ಪೂರ್ಣ ಮೊತ್ತವನ್ನು ಪರವಾನಗಿದಾರರು ಪಾವತಿಸಬೇಕಿರುತ್ತದೆ. ಒಂದು ವೇಳೆ ಇನ್‌ವಾಯ್ಸ್ ಮೊತ್ತ ಪಾವತಿಸಲು ಪರವಾನಗಿದಾರರು ತಡಮಾಡಿದಲ್ಲಿ, ಬಾಕಿ ಪರವಾನಗಿ ಶುಲ್ಕ ಮತ್ತು ಸರಕು & ಸೇವಾ ತೆರಿಗೆ ಮೇಲೂ ವಾರ್ಷಿಕ ಶೇ.18ರಷ್ಟು ಬಡ್ಡಿಯನ್ನು ಕನಿಷ್ಠ 100/- ರಂತೆ, ವಿಳಂಬದ ದಿನಗಳ ಲೆಕ್ಕದಲ್ಲಿ ವಿಧಿಸಲಾಗುವುದು.

V. ಪರವಾನಗಿದಾರರು GST ನೊಂದಣಿ ಮತ್ತು ಇದಕ್ಕೆ ಪೂರಕವಾದ ದಾಖಲೆಗಳನ್ನು ಲಭ್ಯವಿದ್ದಲ್ಲಿ ಈ ಕಚೇರಿಗೆ ಸಲ್ಲಿಸುವುದು.

VI. ಮಾಸಿಕ ಪರವಾನಗಿ ಶುಲ್ಕವು ಪ್ರತಿ ವರ್ಷ ಶೇ.10 ರಷ್ಟು ಹೆಚ್ಚಳವಾಗುವುದು. ಇದಕ್ಕನುಗುಣವಾಗಿ ಸರಕು & ಸೇವಾ ತೆರಿಗೆಯು ಹೆಚ್ಚಳವಾಗುವುದು.

18.)**ವಿದ್ಯುಚ್ಛಕ್ತಿ ಹಾಗೂ ನೀರಿನ ಬಿಲ್ಲುಗಳ ಪಾವತಿ:**

I. ನಿಗಮದ ಕೊಳವೆ ಬಾವಿಗಳಿಂದ ನೀರಿನ ಸೌಲಭ್ಯವನ್ನು ಕಲ್ಪಿಸಿರುವಂತಹ ಮಳಿಗೆಗಳ ಪರವಾನಗಿದಾರರು ಮಾಸಿಕ ಪರವಾನಗಿ ಶುಲ್ಕದ ಶೇ.2 ರಷ್ಟು ಅಥವಾ ಕೊಳವೆ ಬಾವಿಯ ವಿದ್ಯುತ್ ಬಿಲ್ಲಿನ ಶೇ.50 ರಷ್ಟು, ಇದರಲ್ಲಿ ಯಾವುದು ಹೆಚ್ಚಿನದು, ಆ ಮೊತ್ತವನ್ನು ಪಾವತಿಸಬೇಕು.ನಿಗಮದ ನಿರ್ಧಾರಕ್ಕೆ ಪರವಾನಿಗೆದಾರರು ಬದ್ಧರಾಗಿರಬೇಕು.

II. ಒಂದು ವೇಳೆ ಮಳಿಗೆಗಳಿಗೆ ಜಲಮಂಡಳಿ / ಸಂಬಂಧಿಸಿದ ಇಲಾಖೆಗಳಿಂದ ಪ್ರತ್ಯೇಕವಾಗಿ ನೀರಿನ ಮೀಟರ್ ಅಳವಡಿಸಿದ್ದಲ್ಲಿ, ಅಂತಹ ಮಳಿಗೆಯ ಪರವಾನಗಿದಾರರು ಅನ್ವಯಿಸುವ ನೀರಿನ ಶುಲ್ಕವನ್ನು ಸಂಬಂಧಿಸಿದ ಇಲಾಖೆಗೆ ಪಾವತಿಸಬೇಕು.

III. ಪ್ರತಿ ಮಾಹೆಯ ವಿದ್ಯುಚ್ಛಕ್ತಿ ಹಾಗೂ ನೀರಿನ ಬಿಲ್ಲುಗಳನ್ನು ನಿಗದಿತ ಸಮಯದಲ್ಲಿ ಪಾವತಿಸಬೇಕು.

IV. ಒಂದು ವೇಳೆ ನಿಗಮದ ವತಿಯಿಂದ ನೀರಿನ ಸರಬರಾಜು ಮಾಡಲು ಸಾಧ್ಯವಾಗದಿದ್ದಲ್ಲಿ, ಪರವಾನಗಿದಾರರು ತಮ್ಮ ಸ್ವಂತ ಖರ್ಚಿನಲ್ಲಿ ನೀರಿನ ವ್ಯವಸ್ಥೆಯನ್ನು ಮಾಡಿಕೊಳ್ಳಬೇಕಿರುತ್ತದೆ. ಸಂಸ್ಥೆಯು ಯಾವುದೇ ರೀತಿಯ ಭಾದ್ಯಸ್ಥರಲ್ಲ.

19). **ಹೆಚ್ಚುವರಿ ಸ್ಥಳಾವಕಾಶ :** ಪರವಾನಗಿದಾರರು ಟೆಂಡರ್/ಕರಾರು ಒಪ್ಪಂದದಲ್ಲಿ ನಮೂದಿಸಿದ ಸ್ಥಳದ ವಿಸ್ತೀರ್ಣಕ್ಕಿಂತ ಆ ವಾಣಿಜ್ಯ ಮಳಿಗೆಗೆ ಹೊಂದಿಕೊಂಡಂತೆ ಇರುವ ಹೆಚ್ಚುವರಿ ಸ್ಥಳವನ್ನು ಅನಧಿಕೃತವಾಗಿ ಬಳಸಿಕೊಳ್ಳುವುದು ನಿಯಮ ಬಾಹಿರವಾಗಿರುತ್ತದೆ.

20) **ಅನಧಿಕೃತವಾಗಿ ಹೆಚ್ಚುವರಿ ಸ್ಥಳಾವಕಾಶದ ಬಳಕೆ:**

ಪರವಾನಗಿದಾರರು ಅನಧಿಕೃತವಾಗಿ ಬಳಸಿದ ಹೆಚ್ಚುವರಿ ಸ್ಥಳಾವಕಾಶವನ್ನು ನೋಟಿಸ್ ನೀಡಿದ ಕೂಡಲೇ ತೆರವುಗೊಳಿಸಬೇಕು. ಇದಲ್ಲದೆ, ಪರವಾನಗಿದಾರರಿಗೆ ಕೆಳಕಂಡಂತೆ ದಂಡ ವಿಧಿಸಲಾಗುವುದು ಹಾಗೂ ಕರಾರನ್ನು ರದ್ದುಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

| | | |
|---|---|---|
| ಮೊದಲ ಬಾರಿಗೆ | ಉಪಯೋಗಿಸಿದ ಹೆಚ್ಚುವರಿ ಸ್ಥಳಕ್ಕೆ ಮಾಸಿಕ ಪರವಾನಗಿ ಶುಲ್ಕದ 3 ಪಟ್ಟು ಪ್ರೋರೇಟಾ ದರಕ್ಕನುಗುಣವಾಗಿ ದಂಡ ವಿಧಿಸಲಾಗುವುದು | ದಂಡವನ್ನು ಕನಿಷ್ಠ 1 ತಿಂಗಳು, ಗರಿಷ್ಠ ಉಪಯೋಗಿಸಿದ ಒಟ್ಟು ದಿನಗಳಿಗೆ ವಿಧಿಸಲಾಗುವುದು. |
| ಎರಡನೇ ಬಾರಿಗೆ ಹಾಗೂ ಪುನರಾವರ್ತನೆಗೊಂಡಲ್ಲಿ | ಉಪಯೋಗಿಸಿದ ಹೆಚ್ಚುವರಿ ಸ್ಥಳಕ್ಕೆ ಮಾಸಿಕ ಪರವಾನಗಿ ಶುಲ್ಕದ 5 ಪಟ್ಟು ಪ್ರೋರೇಟಾ ದರಕ್ಕನುಗುಣವಾಗಿ ದಂಡ ವಿಧಿಸಲಾಗುವುದು. ಇದಲ್ಲದೆ ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಂಡು, ಕರಾರನ್ನು ರದ್ದುಪಡಿಸುವ ಅಧಿಕಾರವನ್ನು ನಿಗಮವು ಹೊಂದಿರುತ್ತದೆ. | ದಂಡವನ್ನು ಕನಿಷ್ಠ 1 ತಿಂಗಳು, ಗರಿಷ್ಠ ಉಪಯೋಗಿಸಿದ ಒಟ್ಟು ದಿನಗಳಿಗೆ ವಿಧಿಸಲಾಗುವುದು. |

21) ಪರವಾನಗಿ ಪಡೆದ ಮಳಿಗೆಗಳಲ್ಲಿ ಟೆಂಡರ್‌ನಲ್ಲಿ ನಿಗದಿಪಡಿಸಿದ ವ್ಯವಹಾರವನ್ನು ಹೊರತುಪಡಿಸಿ ಇತರೆ ವ್ಯವಹಾರವನ್ನು ನಡೆಸಲು ಅವಕಾಶವಿರುವುದಿಲ್ಲ.

22) **ಕರಾರು ರದ್ಧತಿಯ ಷರತ್ತುಗಳು:**

I. ಯಾವುದೇ ಕಾರಣ ನೀಡದೇ, 4 ತಿಂಗಳ ನೋಟಿಸ್ ನೀಡಿ ಮಳಿಗೆಯ ಪರವಾನಗಿಯನ್ನು ರದ್ದುಪಡಿಸಲು ನಿಗಮವು ಅಧಿಕಾರವನ್ನು ಹೊಂದಿರುತ್ತದೆ.

II. ಪರವಾನಗಿ ಪಡೆದ ಅವಧಿಯಿಂದ ಒಂದು ವರ್ಷದ ಒಳಗೆ ಪರವಾನಗಿದಾರರು, 6 ತಿಂಗಳ ಮಾಸಿಕ ಪರವಾನಗಿ ಶುಲ್ಕವನ್ನು ಮುಂಗಡವಾಗಿ ಪಾವತಿಸಿ, ತಮ್ಮ ಪರವಾನಗಿಯನ್ನು ರದ್ದುಪಡಿಸಿಕೊಳ್ಳಬಹುದು.

III.ಒಂದು ವರ್ಷದ ನಂತರ ಪರವಾನಗಿಯನ್ನು ರದ್ದುಪಡಿಸಿಕೊಳ್ಳಲು ಪರವಾನಗಿದಾರರು ಇಚ್ಛಿಸಿದಲ್ಲಿ 4 ತಿಂಗಳ ಮಾಸಿಕ ಪರವಾನಗಿ ಶುಲ್ಕವನ್ನು ಮುಂಗಡವಾಗಿ ನಿಗಮಕ್ಕೆ ಪಾವತಿಸಿ, ತಮ್ಮ ಪರವಾನಗಿಯನ್ನು ರದ್ದುಪಡಿಸಿಕೊಳ್ಳಬಹುದು.

IV. ಮಾಸಿಕ ಪರವಾನಗಿ ಶುಲ್ಕ, ಸರಕು & ಸೇವಾ ತೆರಿಗೆ ಮತ್ತು ಇತರೆ ಶುಲ್ಕಗಳನ್ನು ಸತತವಾಗಿ 2 ತಿಂಗಳು ಪಾವತಿಸದೇ ಬಾಕಿ ಉಳಿಸಿಕೊಂಡಲ್ಲಿ, ಅಂತಹ ಮಳಿಗೆಗಳ ಪರವಾನಗಿದಾರರ ಪರವಾನಗಿಯನ್ನು ನಿಗಮದ ವತಿಯಿಂದ ರದ್ದುಪಡಿಸಿ, ಪರವಾನಗಿದಾರರು ನಿಗಮದಲ್ಲಿಟ್ಟಿರುವ ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು.

V. ಬಸ್ ನಿಲ್ದಾಣಗಳ ನವೀಕರಣ ಕಾಮಗಾರಿ / ಆವರಣವನ್ನು ಮೇಲ್ದರ್ಜೆಗೇರಿಸುವ / ದುರಸ್ಥಿ ಕಾರ್ಯಗಳನ್ನು ಕೈಗೆತ್ತಿಕೊಳ್ಳುವ ಸಮಯದಲ್ಲಿ, ನಿಗಮವು ಪರವಾನಗಿದಾರರಿಗೆ ಒಂದು ತಿಂಗಳು ಮುಂಗಡ ನೋಟಿಸ್‌ನ್ನು ಜಾರಿ ಮಾಡಿ ಪರವಾನಗಿಯನ್ನು ರದ್ದುಪಡಿಸಬಹುದು.

23) <u>ಬಿಡ್‌ದಾರರ / ಪರವಾನಗಿದಾರರ ಹೆಸರನ್ನು ಕಪ್ಪುಪಟ್ಟಿಗೆ ಸೇರಿಸುವ ಸಂದರ್ಭಗಳು:</u>

I. ಟೆಂಡರ್‌ನಲ್ಲಿ ಅರ್ಹಗೊಳ್ಳುವ ಸಲುವಾಗಿ ಬಿಡ್‌ದಾರರು / ಪರವಾನಗಿದಾರರು ಸಲ್ಲಿಸಿರುವ ದಾಖಲೆಗಳು ಯಾವುದೇ ಹಂತದಲ್ಲಿ ನೈಜತೆಯಿಂದ ಕೂಡಿಲ್ಲದಿರುವುದು ಕಂಡುಬಂದಲ್ಲಿ, ಅಂತಹ ಬಿಡ್‌ದಾರರ ಆಯ್ಕೆ / ಪರವಾನಗಿದಾರರ ಪರವಾನಗಿಯನ್ನು ರದ್ದುಪಡಿಸಿ, ನಿಗಮದಲ್ಲಿಟ್ಟಿರುವ ಇ.ಎಂ.ಡಿ / ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು. ಅಂತಹ ಬಿಡ್‌ದಾರರನ್ನು / ಪರವಾನಗಿದಾರರನ್ನು ಮುಂದಿನ 02 ವರ್ಷಗಳ ಅವಧಿಗೆ ಕ.ರಾ.ರ.ಸಾ.ನಿಗಮದ ವತಿಯಿಂದ ಆಹ್ವಾನಿಸಲಾಗುವ ಯಾವುದೇ ಟೆಂಡರ್‌ನಲ್ಲಿ ಭಾಗವಹಿಸದಂತೆ ಕಪ್ಪುಪಟ್ಟಿಗೆ ಸೇರಿಸಲಾಗುವುದು.

II. ಬಿಡ್‌ದಾರರು ಬಿಡ್ ಹಿಂದಕ್ಕೆ ಪಡೆದಲ್ಲಿ ಅಥವಾ ತಿದ್ದುಪಡಿಗೊಳಿಸಿದಲ್ಲಿ ಅಥವಾ ಅಗೌರವ ತರುವಂತಹ ಸಂದರ್ಭಗಳಲ್ಲಿ, ಇ.ಎಂ.ಡಿ. ಮೊತ್ತ ಮುಟ್ಟುಗೋಲು ಹಾಕಿಕೊಂಡು, ಮುಂದಿನ 02 ವರ್ಷಗಳ ಅವಧಿಗೆ ಕ.ರಾ.ರ.ಸಾ. ನಿಗಮದ ವತಿಯಿಂದ ಆಹ್ವಾನಿಸಲಾಗುವ ಯಾವುದೇ ಟೆಂಡರ್‌ನಲ್ಲಿ ಭಾಗವಹಿಸದಂತೆ ಕಪ್ಪುಪಟ್ಟಿಗೆ ಸೇರಿಸಲಾಗುವುದು.

III. ಒಂದು ವರ್ಷದ ಅವಧಿಯೊಳಗೆ ಯಾವುದೇ ಕಾರಣದಿಂದ ಪರವಾನಗಿ ರದ್ದುಗೊಳ್ಳುವಂತಹ ಮತ್ತು ಒಂದು ವರ್ಷದ ಅವಧಿಯೊಳಗೆ ಪರವಾನಗಿಯನ್ನು ರದ್ದುಪಡಿಸುವಂತೆ ಮನವಿ ಸಲ್ಲಿಸುವ ಪರವಾನಗಿದಾರರನ್ನು, ಮನವಿ ಸಲ್ಲಿಸಿದ ದಿನಾಂಕದಿಂದ ಮುಂದಿನ 02 ವರ್ಷಗಳ ಅವಧಿಗೆ ಕ.ರಾ.ರ.ಸಾ. ನಿಗಮದ ವತಿಯಿಂದ ಆಹ್ವಾನಿಸಲಾಗುವ ಯಾವುದೇ ಟೆಂಡರ್‌ನಲ್ಲಿ ಭಾಗವಹಿಸದಂತೆ ಕಪ್ಪುಪಟ್ಟಿಗೆ ಸೇರಿಸಲಾಗುವುದು.

IV. ಪರವಾನಗಿ ಅವಧಿಯ ಯಾವುದೇ ಸಮಯದಲ್ಲಿ ಮಳಿಗೆಯನ್ನು ಉಪ-ಪರವಾನಗಿಗೆ ನೀಡಿರುವುದು ಕಂಡು ಬಂದಲ್ಲಿ, ಪರವಾನಗಿಯನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ರದ್ದುಪಡಿಸಲಾಗುವುದು ಹಾಗೂ ಭದ್ರತಾ ಠೇವಣಿ ಮೊತ್ತವನ್ನು ಮುಟ್ಟುಗೋಲು ಹಾಕಿಕೊಂಡು, ಕರಾರು ರದ್ದುಪಡಿಸಿದ ದಿನಾಂಕದಿಂದ ಮುಂದಿನ 02 ವರ್ಷಗಳ ಅವಧಿಗೆ ಕ.ರಾ.ರ.ಸಾ.ನಿಗಮದ ವತಿಯಿಂದ ಆಹ್ವಾನಿಸಲಾಗುವ ಯಾವುದೇ ಟೆಂಡರ್‌ನಲ್ಲಿ ಭಾಗವಹಿಸದಂತೆ ಸದರಿ ಪರವಾನಗಿದಾರರನ್ನು ಕಪ್ಪುಪಟ್ಟಿಗೆ ಸೇರಿಸಲಾಗುವುದು.

V. ಕಪ್ಪು ಪಟ್ಟಿಗೆ ಸೇರಿದ ಪರವಾನಗಿದಾರರು ನಿಗಮದ ಯಾವುದೇ ಟೆಂಡರ್ / ಸಂಧಾನದಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ. ಅಂತಹ ಬಿಡ್‌ದಾರರು / ಅರ್ಜಿದಾರರು ಒಂದು ವೇಳೆ ಟೆಂಡರ್ / ಸಂಧಾನದಲ್ಲಿ ಭಾಗವಹಿಸಿದಲ್ಲಿ, ಯಾವುದೇ ಹಂತದಲ್ಲಿ ಅವರ ಇ.ಎಂ.ಡಿ. ಮೊತ್ತವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

<u>24) ಇತರೆ ಷರತ್ತು ನಿಯಮಗಳು :</u>

1. ಟೆಂಡರ್‌ನಲ್ಲಿ ಆಯ್ಕೆಯಾಗದ ಬಿಡ್‌ದಾರರುಗಳ (H1 & H2 ಹೊರತುಪಡಿಸಿ) ಇ.ಎಂ.ಡಿ. ಮೊತ್ತವನ್ನು ಟೆಂಡರ್ ಅಂತಿಮಗೊಂಡ ನಂತರ ಹಿಂದಿರುಗಿಸಲಾಗುವುದು. H2 ಬಿಡ್‌ದಾರರ ಇ.ಎಂ.ಡಿ. ಮೊತ್ತವನ್ನು H1 ಬಿಡ್‌ದಾರರು ಕರಾರು ಒಪ್ಪಂದ ಮಾಡಿಕೊಂಡ ನಂತರ ಹಿಂದಿರುಗಿಸಲಾಗುವುದು.
2. ಟೆಂಡರ್‌ನಲ್ಲಿ ಅತಿ ಹೆಚ್ಚು ಮಾಸಿಕ ಪರವಾನಿಗೆ ಶುಲ್ಕ ಮೊತ್ತವನ್ನು ಬಿಡ್‌ಮಾಡಿ ಪರವಾನಗಿದಾರರಾಗಿ ಆಯ್ಕೆಯಾದ ಬಿಡ್‌ದಾರರು ನಿಗದಿತ ದಿನಾಂಕದೊಳಗಾಗಿ ಭದ್ರತಾ ಠೇವಣಿ ಹಾಗೂ ಮುಂಗಡ ಮಾಸಿಕ

ಪರವಾನಗಿ ಶುಲ್ಕ ಹಾಗೂ ಇತರ ಶುಲ್ಕಗಳನ್ನು ಪಾವತಿಸಲು ವಿಫಲರಾದಲ್ಲಿ, ಅಂತಹ ಬಿಡ್‌ದಾರರ ಇ.ಎಂ.ಡಿ. ಮೊತ್ತವನ್ನು ನಿಗಮಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.



3. ಒಂದು ವೇಳೆ ಆಯ್ಕೆಯಾದ ಬಿಡ್‌ದಾರರು ಭದ್ರತಾ ಠೇವಣಿ ಮತ್ತು ಮುಂಗಡ ಮಾಸಿಕ ಪರವಾನಗಿ ಶುಲ್ಕಗಳನ್ನು ಪಾವತಿಸಿ, ನಿಗದಿತ ದಿನಾಂಕದೊಳಗಾಗಿ ಕರಾರು ಒಪ್ಪಂದವನ್ನು ಮಾಡಿಕೊಳ್ಳಲು ವಿಫಲರಾದಲ್ಲಿ, ಅಂತಹ ಬಿಡ್‌ದಾರರ ಭದ್ರತಾ ಠೇವಣಿ ಹಾಗೂ ಮುಂಗಡ ಮಾಸಿಕ ಪರವಾನಗಿ ಶುಲ್ಕಗಳನ್ನು ನಿಗಮಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.
4. H2 ಬಿಡ್‌ದಾರರನ್ನು ಪರವಾನಗಿದಾರರಾಗಿ ಆಯ್ಕೆ ಮಾಡಿದಾಗ, ಅವರು ಕರಾರು ಒಪ್ಪಂದ ಮಾಡಿಕೊಳ್ಳಲು ವಿಫಲರಾದಲ್ಲಿ, ಅವರ ಇ.ಎಂ.ಡಿ. ಮೊತ್ತವನ್ನು ಸಹ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.
5. ಪರವಾನಗಿ ಪಡೆದ ಪರವಾನಗಿದಾರರೇ ಮಳಿಗೆಯನ್ನು ನಡೆಸುವುದು. ಮಳಿಗೆಗಳನ್ನು ಉಪ ಪರವಾನಗಿಗೆ ನೀಡಲು ಅವಕಾಶವಿರುವುದಿಲ್ಲ.
6. ಮುಷ್ಕರ / ಬಂದ್ ಅವಧಿಯಲ್ಲಿ ಮಾಸಿಕ ಪರವಾನಗಿ ಶುಲ್ಕದಲ್ಲಿ ರಿಯಾಯಿತಿಗೆ ಅವಕಾಶವಿರುವುದಿಲ್ಲ.
7. ಪರವಾನಗಿದಾರರು ತಮ್ಮ ವ್ಯವಹಾರಕ್ಕೆ ಸಂಬಂಧಿಸಿದ ಜಿ.ಎಸ್.ಟಿ., ಆದಾಯ ತೆರಿಗೆ, ಭವಿಷ್ಯ ನಿಧಿ, ಇ.ಎಸ್.ಐ, ಸೇಲ್ಸ್ ಟ್ಯಾಕ್ಸ್ ಕ್ಲಿಯರೆನ್ಸ್ ಪ್ರಮಾಣ ಪತ್ರ, ಟ್ರೇಡ್ ಲೈಸೆನ್ಸ್, ಲೇಬರ್ ಲೈಸೆನ್ಸ್, ಫುಡ್ ಲೈಸೆನ್ಸ್ ಇತ್ಯಾದಿ ಪ್ರಮಾಣಪತ್ರಗಳನ್ನು ಹೊಂದಿರಬೇಕು. ನಿಗಮವು & ಸರ್ಕಾರದ ಇತರ ಇಲಾಖೆಯವರು ದಾಖಲೆಗಳನ್ನು ಹಾಜರುಪಡಿಸಲು ಕೋರಿದ್ದಲ್ಲಿ ಸಂಬಂಧಿಸಿದ ದಾಖಲೆಗಳನ್ನು ಕೂಡಲೇ ಸಲ್ಲಿಸಬೇಕಾಗಿರುತ್ತದೆ.
8. ಸ್ಥಳೀಯ ಇಲಾಖೆ / ಪ್ರಾಧಿಕಾರಗಳು ವಿಧಿಸುವ ತೆರಿಗೆಯನ್ನು ಪರವಾನಗಿದಾರರೇ ಸಂಬಂಧಿಸಿದ ಇಲಾಖೆ / ಪ್ರಾಧಿಕಾರಗಳಿಗೆ ಸಂದಾಯ ಮಾಡಲು ಜವಾಬ್ದಾರರಾಗಿರುತ್ತಾರೆ.
9. ನಿಗಮದ ವ್ಯವಹಾರಕ್ಕೆ ವ್ಯತಿರಿಕ್ತ ಪರಿಣಾಮ ಉಂಟುಮಾಡುವ ವ್ಯವಹಾರವನ್ನು, ನಿಗಮದ ವತಿಯಿಂದ ನಿಷೇದಿಸಲ್ಪಟ್ಟ, ಮುಂದೆ ನಿಷೇಧಿಸಲ್ಪಡುವ ವಸ್ತುಗಳು ಮತ್ತು ಕಾನೂನುಬಾಹಿರ ವಸ್ತುಗಳ ಮಾರಾಟವನ್ನು ಮಳಿಗೆಗಳಲ್ಲಿ ನಿಷೇಧಿಸಲಾಗಿದೆ. ಈ ರೀತಿಯ ವಸ್ತುಗಳ ಮಾರಾಟ ಕಂಡುಬಂದಲ್ಲಿ, ಪರವಾನಗಿಯನ್ನು ರದ್ದುಪಡಿಸಿ, ಕಾನೂನು ಕ್ರಮ ಕೈಗೊಳ್ಳಲಾಗುವುದು.
10. ಆಯ್ಕೆಗೊಂಡ ಪರವಾನಗಿದಾರರು ನಿಗಮದ ವಾಣಿಜ್ಯ ಮಳಿಗೆಗಳಲ್ಲಿ ಅಗ್ನಿ ರಕ್ಷಕ / ಶಾಮಕ ಉಪಕರಣಗಳನ್ನು ಕಡ್ಡಾಯವಾಗಿ ಅಳವಡಿಸುವುದು. ಅಗ್ನಿ ಅವಘಡ ಹಾಗೂ ಇತರೆ ನೈಸರ್ಗಿಕ ದುರಂತಗಳಿಗೆ ನಿಗಮವು ಜವಾಬ್ದಾರಿಯಾಗಿರುವುದಿಲ್ಲ.
11. ಲಾಡ್ಜಿಂಗ್ & ಡಾರ್ಮಿಟರಿ/ಯಾತ್ರಿನಿವಾಸ, ಉಪಹಾರ ಗೃಹ, ಬೇಕರಿ ಮಳಿಗೆಗಳು, ಚಾಟ್ಸ್ ಸೆಂಟರ್ , ಂಇವುಗಳನ್ನು ಹೊರತುಪಡಿಸಿ, ಇತರೆ ಮಳಿಗೆಗಳಲ್ಲಿ ಎಲ್ಲಾ ಮಾದರಿಯ ಸ್ಟೌವ್ / ಗ್ಯಾಸ್ ಬಳಕೆಯನ್ನು ನಿಷೇಧಿಸಲಾಗಿದೆ.
12. ಮಳಿಗೆಗಳಲ್ಲಿ ಟೂರಿಸ್ಟ್ ಟ್ರಾವಲ್, ಮಧ್ಯಪಾನ, ಮಾಂಸ ಮತ್ತು ಇತರೆ ಕಾನೂನು ಬಾಹಿರ ಚಟುವಟಿಕೆಗಳಿರುವ ವ್ಯಾಪಾರ, ಮಾದಕ ವಸ್ತುಗಳು, ವಾಯು ಮಾಲಿನ್ಯ ಉಂಟುಮಾಡುವ ಹಾಗೂ ಸಂಸ್ಥೆಯ ಹಿತಕ್ಕೆ ಧಕ್ಕೆಯಾಗುವಂತಹ ವ್ಯಾಪಾರಗಳನ್ನು ಹೊರತು ಪಡಿಸಿದೆ.
13. ಆಯ್ಕೆಯಾಗುವ ಪರವಾನಿಗೆದಾರರೇ ಮೂಲಭೂತ ಸೌಕರ್ಯಗಳನ್ನು ನಿರ್ಮಿಸಿಕೊಳ್ಳಬಹುದಾಗಿರುತ್ತದೆ ಹಾಗೂ ಕಟ್ಟಡದ ಮೂಲ ಸ್ವರೂಪದಲ್ಲಿ ಯಾವುದೇ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
14. ಬಸ್ ನಿಲ್ದಾಣದಲ್ಲಿರುವ ವಾಣಿಜ್ಯ ಮಳಿಗೆಗಳಲ್ಲಿ ಸಿಗರೇಟು/ಗುಟ್ಕಾ ಮತ್ತು ಇನ್ನಿತರೆ ತಂಬಾಕು ಪದಾರ್ಥಗಳ ಮಾರಾಟವನ್ನು ಕಡ್ಡಾಯವಾಗಿ ನಿಷೇದಿಸಿದೆ.
15. ಉಪಹಾರ ಗೃಹ/ವಾಣಿಜ್ಯ ಮಳಿಗೆಗಳಲ್ಲಿ ನೇಮಿಸಿಕೊಂಡಿರುವ ಕಾರ್ಮಿಕರಿಗೆ ಕಾರ್ಮಿಕ ಇಲಾಖೆಯು ನಿಗದಿಪಡಿಸಿರುವ ಇಎಸ್‌ಐ/ಫಿ.ಎಫ್ ಹಾಗೂ ಇನ್ನಿತರೆ ಸೌಲಭ್ಯವನ್ನು ಎರಡನೇ ಪಾರ್ಟಿ ಪರವಾನಿಗೆದಾರರು ಒದಗಿಸುವುದು, ಸಂಬಂಧಿಸದಿದ್ದಲ್ಲಿ, ಸ್ವಯಂ ಘೋಷಣಾ ಪತ್ರವನ್ನು ಸಲ್ಲಿಸುವುದು. ತಪ್ಪಿದ್ದಲ್ಲಿ ಭದ್ರತಾ ಠೇವಣಿ ಮೊತ್ತವನ್ನು ಮುಟ್ಟುಗೊಲು ಹಾಕಿಕೊಂಡು ಕರಾರು ಒಪ್ಪಂದ ರದ್ದುಪಡಿಸಲಾಗುವುದು.
16. ಪರವಾನಗಿದಾರರು ಬಾಲ ಕಾರ್ಮಿಕರನ್ನು ನೇಮಿಸಿಕೊಳ್ಳುವಂತಿಲ್ಲ.
17. ಉಪಹಾರ ಗೃಹವನ್ನು ಹೊರತುಪಡಿಸಿ, ಉಳಿದ ವಾಣಿಜ್ಯ ಮಳಿಗೆಗಳಲ್ಲಿ ಗ್ಯಾಸ್‌ನ್ನಾಗಲಿ, ಹೊಟ್ಟಾಗಲಿ ಅಥವಾ ವಿದ್ಯುತ್ ಬಳಿಸಿ ಒಲೆಯನ್ನು ಉರಿಸುವಂತಿಲ್ಲ.

18. ಉಪಹಾರಗೃಹ(ಸಸ್ಯಾಹಾರಿ) ಮಳಿಗೆ ಸಂಖ್ಯೆ:13ಕ್ಕೆ ಐದು ವರ್ಷದ ಅವಧಿಗೆ ಪರವಾನಿಗೆ ನಿಗದಿಪಡಿಸಲಾಗಿದೆ. ಉಪಹಾರಗೃಹದ ಪರವಾನಗಿದಾರರು ನವೀಕರಣಕ್ಕೆ ಇಚ್ಛಿಸಿದಲ್ಲಿ, ಕರಾರು ಒಪ್ಪಂದದ ಅವಧಿ ಮುಕ್ತಾಯವಾಗುವ ಆರು ತಿಂಗಳು ಮುಂಚಿತವಾಗಿ ಮನವಿ ಸಲ್ಲಿಸಬೇಕು. ಉಪಹಾರಗೃಹದ ಪರವಾನಿಗೆದಾರರ ಮನವಿಯ ಮೇರೆಗೆ, ಪರವಾನಗಿ ಅವಧಿಯಲ್ಲಿನ ಉಪಹಾರಗೃಹದ ನಿರ್ವಹಣೆಯ ಗುಣಮಟ್ಟ ಮತ್ತು ಮಾಸಿಕ ಪರವಾನಗಿ ಶುಲ್ಕ ಮತ್ತು ಜಿಎಸ್‌ಟಿ ಹಾಗೂ ಇನ್ನಿತರ ಶುಲ್ಕಗಳ ಪಾವತಿಯನ್ನು ಪರಿಗಣಿಸಿ, ಪರವಾನಿಗೆ ಅವಧಿಯ ಮುಕ್ತಾಯದ ನಂತರ 6ನೇ ವರ್ಷಕ್ಕೆ, ಪರವಾನಿಗೆ ಶುಲ್ಕದ ಮೇಲೆ ಶೇ.15ರಷ್ಟು ಹೆಚ್ಚಳದೊಂದಿಗೆ ಹಾಗೂ ತದನಂತರ ಪ್ರತಿವರ್ಷ ಪರವಾನಿಗೆ ಶುಲ್ಕದ ಶೇ.10ರಷ್ಟು ಪರವಾನಿಗೆ ಶುಲ್ಕ ಮತ್ತು ಅನ್ವಯಿಸುವ ಜಿಎಸ್‌ಟಿ ಹಾಗೂ ಇತರ ಶುಲ್ಕದ ಹೆಚ್ಚಳದ ಷರತ್ತಿನೊಂದಿಗೆ ಮುಂದಿನ 5 ವರ್ಷಗಳ ಅವಧಿಗೆ ನವೀಕರಿಸಲಾಗುವುದು. ಕರಾರು ನವೀಕರಣದ ಬಗ್ಗೆ ತೀರ್ಮಾನದ ಹಕ್ಕನ್ನು ನಿಗಮವು ಕಾಯ್ದಿರಿಸಿದೆ.



19. ಕರ್ನಾಟಕ ರಾಜ್ಯ ಸರ್ಕಾರವು ಜಾರಿ ಮಾಡಿರುವ 1957 ರ ಗ್ರಾಹಕರ ಅಧಿನಿಯಮ–6/23(1)ರ ಅನ್ವಯ ಗ್ರಾಹಕರಿಗೆ ಮಳಿಗೆಯಲ್ಲಿ ವ್ಯಾಪಾರ ಮಾಡುವ ಸಾಮಾಗ್ರಿಗಳ ಪೊಟ್ಟಣದ ಮೇಲೆ ಮುದ್ರಿಸಿರುವ ಗರಿಷ್ಟ ಚಿಲ್ಲರೆ ಬೆಲೆಗಿಂತ ಹೆಚ್ಚಿಗೆ ಬೆಲೆ ಪಡೆಯುವುದಾಗಲಿ ಅಥವಾ ಬೆಲೆಯನ್ನು ಅಳಿಸುವುದು/ತಿದ್ದುವುದು/ಇತ್ಯಾದಿಗಳನ್ನು ಮಾಡಿದ ಬಗ್ಗೆ ದೂರುಗಳು ಬಂದಲ್ಲಿ / ನಿಗಮದ ಹೆಸರಿಗೆ ಧಕ್ಕೆ ಬರುವಂತಹ ಸನ್ನಿವೇಶಗಳಲ್ಲಿ ಪರವಾನಗಿದಾರರ ಪರವಾನಗಿಯನ್ನು ರದ್ದು ಪಡಿಸಲಾಗುವುದು.
20. ಟೆಂಡರ್/ಸಂಧಾನ ಪ್ರಕಟಣೆಯಲ್ಲಿ ಆಯ್ಕೆಯಾದವರು ತಮ್ಮ ಸ್ವಂತ ಖರ್ಚಿನಲ್ಲಿ ಕರ್ನಾಟಕ ಸ್ಟಾಂಪ್ ಆಕ್ಟ್‌ನಂತೆ ಸ್ಟಾಂಪ್ ಶುಲ್ಕವನ್ನು ಭರಿಸಿ ಕರಾರು ಒಪ್ಪಂದ ಮಾಡಿಕೊಳ್ಳಬೇಕಾಗಿರುತ್ತದೆ.
21. ಕರಾರು ಒಪ್ಪಂದ ಮಾಡಿಕೊಳ್ಳುವ ಸಮಯದಲ್ಲಿ ಸೇಲ್ಸ್ ಟ್ಯಾಕ್ಸ್ ಕ್ಲಿಯರೆನ್ಸ್ ಸರ್ಟಿಫಿಕೇಟ್ ನೀಡುವುದು.
22. ಟೆಂಡರ್‌ನಲ್ಲಿ ಭಾಗವಹಿಸುವ ಅರ್ಜಿದಾರರು/ಬಿಡ್‌ದಾರರು ನಿಗಮಕ್ಕೆ ಯಾವುದೇ ಷರತ್ತುಗಳನ್ನು ಹಾಕುವಂತಿಲ್ಲ, ನಿಗಮವು ಕಾಲಕಾಲಕ್ಕೆ ವಿಧಿಸುವ ಎಲ್ಲಾ ಷರತ್ತುಗಳನ್ನು ಒಪ್ಪಿಕೊಳ್ಳತಕ್ಕದಾಗಿರುತ್ತದೆ.
23. ಪರವಾನಗಿದಾರರು / ಬಿಡ್ಡದಾರರು ಕಡ್ಡಾಯವಾಗಿ ಪಾನ್‌ಕಾರ್ಡ್ ಹೊಂದಿಟರಬೇಕಾಗಿರುತ್ತದೆ.
24. ಇ.ಎಸ್.ಐ ಕಾಯ್ದೆಯ ವ್ಯಾಪ್ತಿಯಲ್ಲಿ ಬರುವ ವಾಣಿಜ್ಯ ಮಳಿಗೆಗಳ / ಸ್ಥಳಗಳ ಪರವಾನಗಿದಾರರುಗಳು ಇ.ಎಸ್.ಐ ಕೋಡ್‌ನ್ನು ಹೊಂದಿರಬೇಕು ಮತ್ತು ಅವರುಗಳ ವ್ಯಾಪ್ತಿಯಲ್ಲಿ ಬರುವ ನೌಕರರನ್ನು ಇ.ಎಸ್.ಐ ವ್ಯಾಪ್ತಿಯಲ್ಲಿ ತರಬೇಕು ಮತ್ತು ಇ.ಎಸ್.ಐ ಕಾರ್ಡ್‌ನ್ನು ಕೊಡಿಸಬೇಕು.
25. ಇ.ಎಸ್.ಐ ಕಾಯ್ದೆಯ ವ್ಯಾಪ್ತಿಯಲ್ಲಿ ಬರುವ ವಾಣಿಜ್ಯ ಮಳಿಗೆಗಳ / ಸ್ಥಳಗಳ ಪರವಾನಗಿದಾರರುಗಳು ನಿಗದಿತ ವಂತಿಕೆಯನ್ನು ಆನ್‌ಲೈನ್‌ನಲ್ಲಿ ಸಲ್ಲಿಸಬೇಕು ಮತ್ತು ಇ.ಎಸ್.ಐ ಸೌಲಭ್ಯಗಳನ್ನು ನೌಕರರಿಗೆ ಮತ್ತು ಅವರ ಅವಲಂಬಿತರಿಗೆ ಸಿಗುವಂತೆ ಸಹಾಯ ಮಾಡಬೇಕು.
26. ವಾಣಿಜ್ಯ ಮಳಿಗೆಗಳಿಗೆ ಸಂಬಂಧಿಸಿದ ವ್ಯವಹಾರಗಳನ್ನು ಪ್ರಾರಂಭಿಸಲು ಕಾನೂನು ರೀತಿಯಲ್ಲಿ ಆಗತ್ಯವಿರುವ ಪರವಾನಿಗೆಯನ್ನು ಸಂಬಂಧಿಸಿದ ಪ್ರಾಧಿಕಾರಗಳಿಂದ ಪರವಾನಗಿದಾರರು ಪಡೆದುಕೊಳ್ಳತಕ್ಕದ್ದು.
27. ಕಟ್ಟಿದ/ತೆರೆದ ಸ್ಥಳದ ಮಳಿಗೆಗಳಿಗೆ ಆಯ್ಕೆಯಾಗಿರುವ ಪರವಾನಿಗೆದಾರರು ಪರವಾನಿಗೆ ಅವಧಿಯು ಮುಕ್ತಾಯದ ನಂತರ ಅಥವಾ ಕರಾರು ರದ್ದತಿಯ ನಂತರ ತಾವು ತಾತ್ಕಾಲಿಕವಾಗಿ ನಿರ್ಮಿಸಿಕೊಂಡಿರುವ ಮಳಿಗೆ(ಶೆಡ್)/Structure ಇತರೆ ಮಾರ್ಪಾಡುಗಳನ್ನು ತೆರವುಗೊಳಿಸಿ ಖಾಲಿ ಸ್ಥಳವನ್ನು ನಿಗಮದ ವಶಕ್ಕೆ ಒಪ್ಪಿಸುವುದು, ಸಂಪೂರ್ಣವಾಗಿ ತೆರೆದ ಸ್ಥಳದಲ್ಲಿ ನಿರ್ಮಿಸಿಕೊಂಡಿರುವ ಶೆಡ್ (ಮಳಿಗೆ)/Structure ತೆರವುಗೊಳಿಸದಿದ್ದಲ್ಲಿ ಭದ್ರತಾ ಠೇವಣಿ ಮುಟ್ಟುಗೋಲು ಹಾಕಿಕೊಂಡು ಶೆಡ್ (ಮಳಿಗೆ)/Structure ನ್ನು ನಿಗಮದ ವಶಕ್ಕೆ ಪಡೆದುಕೊಳ್ಳಲಾಗುವುದು.
28. ಯಾವುದೇ ಸಮಯದಲ್ಲಿ ಹೆಚ್ಚಿನ ಷರತ್ತು ಮತ್ತು ನಿಬಂಧನೆಗಳನ್ನು ಕರಾರಿನಲ್ಲಿ ಸೇರಿಸಲು ಮತ್ತು ಮಾರ್ಪಡಿಸಲು ನಿಗಮವು ಅಧಿಕಾರ ಹೊಂದಿರುತ್ತದೆ.
29. ಪರವಾನಗಿದಾರರು ಮತ್ತು ನಿಗಮದ ಮಧ್ಯೆ ಯಾವುದೇ ವ್ಯಾಜ್ಯ / ತಕರಾರು ಉಂಟಾದಲ್ಲಿ, ನಿಗಮದ ವ್ಯವಸ್ಥಾಪಕ ನಿರ್ದೇಶಕರು ಮಧ್ಯಸ್ಥಿಕೆದಾರರಾಗಿರುತ್ತಾರೆ. ಸದರಿಯವರ ತೀರ್ಮಾನವೇ ಅಂತಿಮವಾಗಿರುತ್ತದೆ.
30. ಕರಾರಿನಿಂದ ಉದ್ಭವಿಸಬಹುದಾದಂತಹ ಯಾವುದೇ ವ್ಯಾಜ್ಯ ಅಥವಾ ವಿವಾದ ಕ್ಲೇಮುಗಳನ್ನು ಪರಿಹರಿಸಿಕೊಳ್ಳುವುದಕ್ಕಾಗಿ ಉಭಯ ಪಕ್ಷದವರು ಅಂತಹ ವಿವಾದವನ್ನು ಕರ್ನಾಟಕ Arbitration ಕೇಂದ್ರ (ದೇಶಿಯ, ಅಂತರ್‌ದೇಶಿಯ)ನಿಯಮಗಳು, 2012ರಡಿಯಲ್ಲಿ ನೇಮಕಗೊಂಡ ಒಬ್ಬರು ಅಥವಾ ಹಲವು ಪಂಚಾಯತ್‌ದಾರರ ಮೂಲಕ ಪರಿಹರಿಸಲು ಒಪ್ಪಿಕೊಳ್ಳಲಾಗಿದೆ.
31. ಯಾವುದೇ ಕಾರಣ ನೀಡದೇ ಟೆಂಡರನ್ನು ಪುರಸ್ಕರಿಸುವ / ತಿರಸ್ಕರಿಸುವ ಅಧಿಕಾರವನ್ನು ನಿಗಮವು ಹೊಂದಿರುತ್ತದೆ.
32. ನಿಗಮದಿಂದ ಕರೆಯಲಾಗುವ ಯಾವುದೇ ಟೆಂಡರ್/ಸಂಧಾನವನ್ನು ಯಾವುದೇ ಸಮಯದಲ್ಲಿ ಯಾವುದೇ ಕಾರಣವನ್ನು ನೀಡದೇ ರದ್ದುಪಡಿಸುವ ಅಧಿಕಾರವನ್ನು ನಿಗಮವು ಕಾಯ್ದಿರಿಸಿಕೊಂಡಿರುತ್ತದೆ.

33. ಇ–ಟೆಂಡರ್ ಪ್ರಕಟಣೆಯನ್ನು ಯಾವುದೇ ಕಾರಣ ನೀಡದೆ ಮುಂದೂಡುವ & ತಿರಸ್ಕರಿಸುವ ಹಾಗೂ ರದ್ದು ಮಾಡುವ ಹಕ್ಕನ್ನು ನಿಗಮವು ಕಾಯ್ದಿರಿಸಿಕೊಂಡಿದೆ.

ಸಹಿ/–
ವಿಭಾಗೀಯ ನಿಯಂತ್ರಣಾಧಿಕಾರಿ
ಕರಾರಸಾನಿಗಮ :ಮಂಗಳೂರು